ಸಂಪುಟ: 06 ಸಂಚಿಕೆ: 177 ಪುಟಗಳು: 08 ಮಂಗಳವಾರ 08 ಸೆಪ್ಟೆಂಬರ್ 2026 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಹಣಕ್ಕೂ, ಋಣಕ್ಕೂ ತುಂಬಾನೆ ವ್ಯತ್ಯಾಸ. ಹಣಕ್ಕೆ ಎಲ್ಲಾ ಕೆಲಸ ಮಾಡಬೇಕು. ಅದೇ ಋಣಕ್ಕೆ ಬರೀ ಒಳ್ಳೆಯ ಕೆಲಸ ಅಷ್ಟೇ ಮಾಡಬೇಕು.

## ಇ.ಡಿ. ವಿಚಾರಣೆಗೆ ಹಾಜರಾದ ಬಿ.ನಾಗೇಂದ್ರ

• ಉದಯವಾಹಿನಿ, ಬೆಂಗಳೂರು

ವಾಲ್ಮೀಕಿ ಅಭಿವೃದ್ಧಿ ನಿಗಮ ಅವ್ಯವಹಾರ ಪ್ರಕರಣ ಸಂಬಂಧ ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆ ಸಂಬಂಧ ಜಾರಿ ನಿರ್ದೇಶನಾಲಯ ಅಧಿಕಾರಿಗಳ ಮುಂದೆ ಮಾಜಿ ಸಚಿವ ಬಿ. ನಾಗೇಂದ್ರ ವಿಚಾರಣೆಗೆ ಹಾಜರಾಗಿದ್ದಾರೆ.

ಜಾಲಹಳ್ಳಿಯ ಹೆಚ್ ಎಂಟಿ ಭವನದಲ್ಲಿರುವ ಇ.ಡಿ. ಕಚೇರಿಗೆ ಸೋಮವಾರ ಮಧ್ಯಾಹ್ನ ವಿಚಾರಣೆಗೆ ನಾಗೇಂದ್ರ ಹಾಜರಾಗಿದ್ದಾರೆ. ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದಿದ್ದ ಬಹುಕೋಟಿ ಅಕ್ರಮ ಸಂಬಂಧ ನಾಗೇಂದ್ರ ವಿರುದ್ಧ ಪಿಎಂಎಲ್ ಎ ಕಾಯ್ದೆಯಡಿ ಪ್ರಕರಣ ದಾಖಲಿಸಿ ಇ.ಡಿ. ಬಂಧಿಸಿತ್ತು. ನಾಗೇಂದ್ರ ವಿರುದ್ಧ 2024ರಲ್ಲಿ ನಗರದ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ಚಾರ್ಜ್ ಶೀಟ್ ಸಲ್ಲಿಸಿತ್ತು.

ಪ್ರಕರಣದಲ್ಲಿ ಮಾಜಿ ಸಚಿವ ನಾಗೇಂದ್ರಗೆ ಹೈದರಾಬಾದ್ ಫಸ್ಟ್ ಕ್ರೆಡಿಟ್ ಕೋ ಆಪರೇಟಿವ್ ಬ್ಯಾಂಕನ ವ್ಯವಸ್ಥಾಪಕ ನಿರ್ದೇಶಕ ಸತ್ಯನಾರಾಯಣ್, ಬ್ಯಾಂಕ್ ಅಧ್ಯಕ್ಷ ಇಟಕಾರಿ ಸತ್ಯನಾರಾಯಣ, ವಾಲ್ಮೀಕಿ ಅಭಿವೃದ್ಧಿ ನಿಗಮದ ಎಂ.ಡಿ. ಜೆ.ಜಿ. ಪದ್ಮನಾಭ, ಸಹಚರರಾದ ನಾಗೇಶ್ವರ ರಾವ್, ನೆಕ್ಕುಂಟಿ ನಾಗರಾಜ್ ಹಾಗೂ ವಿಜಯ್ ಕುಮಾರ್ ಗೌಡ ಸೇರಿದಂತೆ 24 ಮಂದಿ ಅಕ್ರಮದಲ್ಲಿ ಶಾಮೀಲಾಗಿದ್ದಾರೆ ಎಂದು ಇಡಿ ಚಾರ್ಜ್ ಶೀಟ್‌ನಲ್ಲಿ ದಾಖಲಿಸಿದೆ.

ಅವ್ಯವಹಾರ ಸಂಬಂಧ ಎಸ್‌ಐಟಿ ಹಾಗೂ ಸಿಬಿಐ ಪರ್ಯಾಯವಾಗಿ ತನಿಖೆ ನಡೆಸುತ್ತಿವೆ. ಪತ್ತೆ ಹಚ್ಚಲಾದ 89.62 ಕೋಟಿ ಹಣ ಆಂಧ್ರ ಪ್ರದೇಶ ಹಾಗೂ ತೆಲಂಗಾಣದ ವಿವಿಧ ಬ್ಯಾಂಕ್‌ಗಳಲ್ಲಿ ನಕಲಿ ಖಾತೆಗಳಿಗೆ ವರ್ಗಾವಣೆ ಆಗಿರುವುದು ತಿಳಿದುಬಂದಿದೆ.

## ಬರ ಘೋಷಣೆ ಸಂಬಂಧ 'ಕೈ' ನಾಯಕರ ಜಟಾಪಟಿ

• ಉದಯವಾಹಿನಿ, ಬೆಂಗಳೂರು

ಬರ ಘೋಷಣೆ ವಿಚಾರವಾಗಿ ಸಚಿವ ಎಂ.ಬಿ. ಪಾಟೀಲ್ ವಿರುದ್ಧ ಮುದ್ದೇಬಿಹಾಳ ಕಾಂಗ್ರೆಸ್ ಹಿರಿಯ ಶಾಸಕ ಅಪ್ಪಾಜಿ ಸಿ.ಎಸ್. ನಾಡಗೌಡ ಬಹಿರಂಗ ಸಮರ ಸಾರಿದ್ದಾರೆ. ಬರ ವಿಚಾರವಾಗಿ ವಿಜಯಪುರ ಜಿಲ್ಲೆಯ ಹಿರಿಯ ಕೈ ನಾಯಕರ ಮಧ್ಯೆ ಜಟಾಪಟಿ ಏರ್ಪಟ್ಟಿದೆ. ಸಚಿವ ಎಂ.ಬಿ. ಪಾಟೀಲ್ ವಿರುದ್ಧ ಆಕ್ರೋಶ ಹೊರಹಾಕಿರುವ ಮುದ್ದೇಬಿಹಾಳ ಕ್ಷೇತ್ರದ ಕಾಂಗ್ರೆಸ್ ಶಾಸಕ ಅಪ್ಪಾಜಿ ಸಿ.ಎಸ್. ನಾಡಗೌಡ ಮಾಧ್ಯಮ ಪ್ರಕಟಣೆ ಹೊರಡಿಸಿ, ಸಚಿವ ಎಂ.ಬಿ. ಪಾಟೀಲ್ ಅವರಿಗೆ ರಾಜಕೀಯ ನಿವೃತ್ತಿಯ ಸವಾಲು ಹಾಕಿದ್ದಾರೆ. ನಮ್ಮ ಮತಕ್ಷೇತ್ರದ ಮುದ್ದೇಬಿಹಾಳ ಮತ್ತು ತಾಳಿಕೋಟಿ ತಾಲ್ಲೂಕುಗಳನ್ನು ನಿಯಮಾನುಸಾರ ಬರಪಟ್ಟಿಯಲ್ಲಿ ಸೇರಿಸುವುದು ಜಿಲ್ಲಾ ಮಂತ್ರಿಗಳ ಕರ್ತವ್ಯವಾಗಿದೆ. ಈ ಹಿನ್ನೆಲೆಯಲ್ಲಿ ನಾನು ಅನ್ಯಾಯವಾಗಿದ್ದನ್ನು ಪ್ರಶ್ನಿಸುವುದು ನನ್ನ ಕರ್ತವ್ಯವಾಗಿದೆ. ಅದನ್ನು ನಾನು ಕೇಳಿದ್ದೇನೆ, ಒತ್ತಾಯಿಸಿದ್ದೇನೆ.

ಈ ಕುರಿತು ನಾನು ನಮಗಾದ ಅನ್ಯಾಯ ವಿರುದ್ಧ ಸತ್ಯಾಗ್ರಹ ಮಾಡುವುದಾಗಿ ನೀಡಿದ ನನ್ನ ಹೇಳಿಕೆಗೆ ಚಡಪಡಿಸಿ ಒದ್ದಾಡುತ್ತಿರುವ ತಮ್ಮ ಬಗ್ಗೆ ನಾನೇನು ಹೊಸದಾಗಿ ಹೇಳಬೇಕಿಲ್ಲ. ವಿಜಯಪುರ ಜಿಲ್ಲೆಯ ರಾಜಕಾರಣದ ಬಗ್ಗೆ ಗೊತ್ತಿರುವವರೆಲ್ಲರಿಗೂ ನಿಮ್ಮ ಪಿತೂರಿ ಬಗ್ಗೆ ಗೊತ್ತಿರುವುದು ಹೊಸದೇನಲ್ಲ ಎಂದು ಟೀಕಿಸಿದ್ದಾರೆ.

ನಿಮಗೆ ಕಳೆದ ಹಲವು ವರ್ಷಗಳಿಂದ ಜಿಲ್ಲೆಯ ಕಾಂಗ್ರೆಸ್ ಪಕ್ಷದ ಶಾಸಕರಿಗಿಂತ, ನಾಯಕರಿಗಿಂತ ವಿರೋಧ ಪಕ್ಷದ ಹಲವರ ಜೊತೆ ಮಧುರ ಬಾಂಧವ್ಯ ಇದೆ. ತನಗಾಗದವರನ್ನು ಸ್ವಪಕ್ಷೀಯರು ಅಂತಲೂ ನೋಡದೇ ವಾಮಮಾರ್ಗದಿಂದ ಹಣಿಯಲು ಪ್ರಯತ್ನಿಸುತ್ತಿರುವುದನ್ನೆಲ್ಲ ಎಳೆ ಎಳೆಯಾಗಿ ನಾನು ಸೇರಿದಂತೆ ಜಿಲ್ಲೆಯ ಇತರೆ ನಾಯಕರು ಹೈಕಮಾಂಡ್ ಗಮನಕ್ಕೆ ತಂದಿದ್ದೇವೆ.

## ಮಹದೇವಪ್ಪ ಪರ ಬ್ಯಾಟ್ ಬೀಸಿ ಬೈರತಿ ವಿರುದ್ಧ ಪ್ರತಾಪ್ ಕಿಡಿ

• ಉದಯವಾಹಿನಿ, ಬೆಂಗಳೂರು

ಸರ್ಕಾರಿ ನಿವಾಸ ತೆರವು ವಿಚಾರದಲ್ಲಿ ಮಾಜಿ ಸಚಿವ ಡಾ. ಎಚ್.ಸಿ. ಮಹದೇವಪ್ಪ ಪರ ಬ್ಯಾಟ್ ಬೀಸಿದ ಮಾಜಿ ಸಂಸದ ಪ್ರತಾಪ್ ಸಿಂಹ ಹಾಲಿ ಸಚಿವ ಬೈರತಿ ಸುರೇಶ್ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಕಂಪ್ಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ''ಮಹದೇವಪ್ಪ ಅವರು ಹಿರಿಯ ನಾಯಕರು. ಸಿದ್ದರಾಮಯ್ಯ ಅವರಿಗೆ ಹೆಗಲು ಕೊಟ್ಟು, ಕಷ್ಟದ ದಿನಗಳಲ್ಲಿ ಜೊತೆಯಾಗಿ ನಿಂತವರು. 3 ರಿಂದ 6 ತಿಂಗಳು ತಡವಾಗಿ ಖಾಲಿ ಮಾಡಿದರೆ ಏನು ಮುಳುಗಿ ಹೋಗುತ್ತದೆ ಸುರೇಶ್‌ಗೆ ಅದೇ ಮನೆ ಬೇಕೆಂದು ಹಠ ಹಿಡಿದಿರುವುದೇಕೆ ಪಕ್ಷ ಕಟ್ಟಿದ ಹಿರಿಯ ನಾಯಕರಿಗೆ ಒಂದು ನಿವಾಸದ ವಿಚಾರದಲ್ಲಿ ಈ ರೀತಿ ಅಗೌರವ ತೋರುವುದು ಸರಿಯಲ್ಲ. ನಿಮ್ಮ ಸ್ವಂತ ಮನೆಯೇ? ಎಂದು ನೇರವಾಗಿ ಪ್ರಶ್ನಿಸಿದರು. ಬೆಂಗಳೂರಿನಲ್ಲಿ ನಡೆದ ಅಹಿಂದ ಸಮಾವೇಶವನ್ನು ಉಲ್ಲೇಖಿಸಿ ಕಾಂಗ್ರೆಸ್ ವಿರುದ್ಧ ಅವರು, ''ಸಿದ್ದರಾಮಯ್ಯ ಅಹಿಂದ ಸಮಾವೇಶ ನಡೆಸಿದರು, ಆದರೆ ಅದರ ಮೂಲ ಶಕ್ತಿಯಾಗಿದ್ದ ಸತೀಶ್ ಜಾರಕಿಹೊಳಿ ಅವರನ್ನೇ ಕರೆದಿಲ್ಲ. ಅಹಿಂದ ಎಂದರೆ ಸಿದ್ದರಾಮಯ್ಯ ಒಬ್ಬರೇ ಅಲ್ಲ ಎಂಬುದನ್ನು ಸತೀಶ್ ಜಾರಕಿಹೊಳಿ ಈಗಾಗಲೇ ತೋರಿಸಿದ್ದಾರೆ. ಕಾಂಗ್ರೆಸ್ ಸಂಪೂರ್ಣವಾಗಿ ಒಡೆದ ಮನೆಯಾಗಿದ್ದು, ರಾಜ್ಯದ ಜನರು ಆಡಳಿತದಿಂದ ಬೇಸತ್ತಿದ್ದಾರೆ.

## ನಮ್ಮ ಮೆಟ್ರೋ 20 ನಿಲ್ದಾಣಗಳಿಗಿಲ್ಲ ಪ್ರಯಾಣಿಕರ ಸಂಖ್ಯೆ!

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ಸಾರಿಗೆ ವ್ಯವಸ್ಥೆಯನ್ನು ಸುಧಾರಿಸುವುದು ಮತ್ತು ವೇಗವಾಗಿ ಬೆಳೆಯುತ್ತಿರುವ ನಗರದ ಸಂಚಾರ ದಟ್ಟಣೆಯನ್ನು ಕಡಿಮೆ ಮಾಡುವ ಉದ್ದೇಶದಿಂದ ಕಾರ್ಯನಿರ್ವಹಿಸುತ್ತಿರುವ ನಮ್ಮ ಮೆಟ್ರೋ ರೈಲುಗಳಲ್ಲಿ ಪ್ರತಿನಿತ್ಯ ಲಕ್ಷಾಂತರ ಮಂದಿ ಓಡಾಟ ನಡೆಸುತ್ತಿದ್ದಾರೆ. ಹಸಿರು, ನೇರಳೆ ಮತ್ತು ಹಳದಿ ಮಾರ್ಗಗಳಲ್ಲಿ ಈಗಾಗಲೇ ನಮ್ಮ ಮೆಟ್ರೋ ಪ್ರಯಾಣಿಕರಿಗೆ ಉತ್ತಮ ಸೇವೆ ಒದಗಿಸುತ್ತಿದೆ. ಒಂದು ಹಂತಕ್ಕೆ ಬೆಂಗಳೂರಿಗರ ವೇಗದ ಸಂಚಾರ ಜೀವನಾಡಿ ಎಂಬಷ್ಟರ ಮಟ್ಟಿಗೆ ಸಾರ್ವಜನಿಕರು ನಮ್ಮ ಮೆಟ್ರೋ ರೈಲುಗಳನ್ನು ಅವಲಂಬಿಸಿದ್ದಾರೆ. ಹೀಗಿದ್ದರೂ ಅಚ್ಚರಿಯ ಮಾಹಿತಿಯೊಂದು ಬಹಿರಂಗಗೊಂಡಿದೆ. ಹೌದು, ಗ್ರೀನ್ ,ಪರ್ಪಲ್ ಮತ್ತು ಯೆಲ್ಲೋ ಲೈನ್ ಸೇರಿ ಪ್ರತಿದಿನ 11 ರಿಂದ 12 ಲಕ್ಷ ಜನ ನಮ್ಮ ಮೆಟ್ರೋ ರೈಲುಗಳಲ್ಲಿ ಪ್ರಯಾಣ ಮಾಡುತ್ತಾರೆ. ಹೀಗಿದ್ದರೂ ಬೆಂಗಳೂರಿನ 20 ನಿಲ್ದಾಣಗಳಿಂದ ದೊಡ್ಡ ಮಟ್ಟದಲ್ಲಿ ಪ್ರಯಾಣಿಕರು ಸಂಚರಿಸುತ್ತಿಲ್ಲ ಎಂಬ ಮಾಹಿತಿ ಲಭಿಸಿದೆ.

# ಸಿಇಒಗಳು ವಾರದಲ್ಲಿ 2 ದಿನ 4-5 ಗ್ರಾಮಕ್ಕೆ ಭೇಟಿ ನೀಡಿ ಕಡ್ಡಾಯವಾಗಿ ಪರಿಶೀಲಿಸಬೇಕು

• ಉದಯವಾಹಿನಿ, ಬೆಂಗಳೂರು

ರಾಜ್ಯದ ಎಲ್ಲಾ ಜಿಲ್ಲೆಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ವಾರದಲ್ಲಿ ಕನಿಷ್ಠ ಎರಡು ದಿನಗಳ ಕಾಲ ನಾಲ್ಕೈದು ಗ್ರಾಮಗಳಿಗಾದರೂ ದಿಢೀರ್ ಭೇಟಿ ನೀಡಿ ಖುದ್ದು ಪರಿಶೀಲಿಸಬೇಕು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ್ ಖಂಡ್ರೆ ಸೂಚನೆ ನೀಡಿದ್ದಾರೆ. ಈ ಸಂಬಂಧ ಇಲಾಖೆಯ ಕಾರ್ಯದರ್ಶಿಯವರಿಗೆ ಲಿಖಿತ ಸೂಚನೆ ನೀಡಿರುವ ಅವರು, ಸಿಇಒಗಳು ಗ್ರಾ.ಪಂ.ಗಳಿಗೆ ಪೂರ್ವ ಸೂಚನೆ ನೀಡದೆ ಭೇಟಿ ನೀಡಿ, ಹಾಜರಾತಿ, ಪಿಡಿಒ ಮತ್ತು ತಾಲ್ಲೂಕು ಕಾರ್ಯನಿರ್ವಹಣಾಧಿಕಾರಿಗಳ ಕಾರ್ಯವೈಖರಿ ಪರಾಮರ್ಶಿಸುವುದರ ಜೊತೆಗೆ, ಜನರ ಅಹವಾಲು ಆಲಿಸಿ ಸ್ಥಳದಲ್ಲೇ ಕೆಲವು ಸಮಸ್ಯೆಗಳನ್ನಾದರೂ ಪರಿಹರಿಸಬೇಕು ಎಂದು ತಿಳಿಸಿದ್ದಾರೆ. ರಾಜ್ಯದ 31 ಜಿಲ್ಲೆಗಳಲ್ಲಿ 5,900ಕ್ಕೂ ಅಧಿಕ ಗ್ರಾಮ ಪಂಚಾಯತ್‌ಗಳಿದ್ದು, 57,879 ವಸತಿ ಪ್ರದೇಶಗಳಿವೆ. ರಾಜ್ಯದ ಒಟ್ಟು ಜನಸಂಖ್ಯೆ 6 ಕೋಟಿ 13 ಲಕ್ಷ ಇದ್ದು, ಈ ಪೈಕಿ 26,589 ಹಳ್ಳಿಗಳಲ್ಲಿ 4 ಕೋಟಿ 45 ಲಕ್ಷ ಜನರು ವಾಸುತ್ತಿದ್ದಾರೆ. ಅಂದರೆ ರಾಜ್ಯದ ಮುಕ್ಕಾಲು ಭಾಗ ಜನಸಂಖ್ಯೆ ಇರುವುದೇ ಗ್ರಾಮೀಣ ಪ್ರದೇಶಗಳಲ್ಲಿ. ಹೀಗಾಗಿ ಜಿಲ್ಲಾ ಪಂಚಾಯತ್



ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಗ್ರಾಮಾಭಿವೃದ್ಧಿಗೆ ಗಮನ ಹರಿಸಬೇಕು ಎಂದರು. ಜಲಜೀವನ ಮಿಷನ್, ವಿಬಿಜಿ ರಾಮ್ ಜಿ, ಪ್ರಧಾನಮಂತ್ರಿ ವಸತಿ ಯೋಜನೆ (ಗ್ರಾಮೀಣ) ಮತ್ತು ಪ್ರಧಾನಮಂತ್ರಿ ಗ್ರಾಮ ಸಡಕ್ ಯೋಜನೆ, ಮುಖ್ಯಮಂತ್ರಿಗಳ ರಸ್ತೆ ಯೋಜನೆ ಇತ್ಯಾದಿಗಳ ಸಮರ್ಪಕ ಅನುಷ್ಠಾನ ಆಗುತ್ತಿದೆಯೇ, ಕೆರೆಗಳ ಒತ್ತುವರಿ ತೆರವು ಆಗುತ್ತಿದೆಯೇ ಹಾಗೂ ಪಂಚಾಯತ್ ವ್ಯಾಪ್ತಿಯಲ್ಲಿ ಸ್ವಚ್ಛತೆ ಮತ್ತು ಒಣ ಹಾಗೂ ಹಸಿ ತ್ಯಾಜ್ಯ ನಿರ್ವಹಣೆ ಸಮರ್ಪಕವಾಗಿದೆಯೇ ಎಂಬುದನ್ನು ಸಿಇಒಗಳು ನಿಯಮಿತವಾಗಿ ಪರಿಶೀಲಿಸಿದರೆ ಆಗ ಕಾಮಗಾರಿಗಳು ಚುರುಕಾಗಲಿವೆ ಎಂದು ಅಭಿಪ್ರಾಯಪಟ್ಟಿದ್ದಾರೆ.

> ಗ್ರಾಮೀಣ ಜನರಿಗೆ ಶುದ್ಧ ಕುಡಿಯುವ ನೀರು, ಉತ್ತಮ ರಸ್ತೆ, ನೈರ್ಮಲ್ಯ, ವಿಬಿಜಿ ರಾಮ್ ಜಿ ಅಡಿ ಸ್ಥಳದಲ್ಲೇ ಉದ್ಯೋಗ ನೀಡುವ ಬಗ್ಗೆ ಹೆಚ್ಚಿನ ಗಮನ ಹರಿಸಿದರೆ ಗ್ರಾಮಗಳಿಂದ ಜನರು ನಗರಕ್ಕೆ ವಲಸೆ ಹೋಗುವುದು ತಪ್ಪಲಿದೆ. ಇದು ನಗರಗಳ ಮೇಲಿನ ಒತ್ತಡವನ್ನೂ ತಗ್ಗಿಸುತ್ತದೆ, ಜೊತೆಗೆ ಗ್ರಾಮಗಳ ಅಭಿವೃದ್ಧಿಯೂ ಆಗುತ್ತದೆ. ಈಶ್ವರ್ ಖಂಡ್ರೆ, ಸಚಿವ

## ಸಂಬಂಧಗಳು ಹೊಸ ಎತ್ತರಕ್ಕೆ ತಲುಪಿವೆ

## ಮೋದಿ ಉದ್ಘಾಟಿಸಿದ ಸ್ವಾಮಿನಾರಾಯಣ ದೇಗುಲ

# ಭಾರತ-ಫ್ರಾನ್ಸ್ ಬಲ




ಸಂಸ್ಕೃತವನ್ನು ಜನಪ್ರಿಯಗೊಳಿಸುವಲ್ಲಿ ಫ್ರೆಂಚ್ ವಿದ್ವಾಂಸರುವಹಿಸಿದ ಪ್ರಮುಖ ಪಾತ್ರವು ಭಾಷಾಭಿಮಾನಿಗಳಿಗೆ ಗೊತ್ತಿದೆ. ರಾಮಕೃಷ್ಣ ಪರಮಹಂಸ ಮತ್ತು ಸ್ವಾಮಿ ವಿವೇಕಾನಂದರ ಕುರಿತು ರೊಮೈನ್ ರೋಲ್ಯಾಂಡ್ ಅವರ ಬರಹಗಳು ನಮ್ಮ ಸಮಾಜಗಳನ್ನು ಹತ್ತಿರಕ್ಕೆ ತಂದವು. ಅಲ್ಲದೆ, ಪ್ಯಾರಿಸ್‌ನಿಂದ ಪುದುಚೇರಿಯ ಶ್ರೀಅರಬಿಂದೋ ಆಶ್ರಮಕ್ಕೆ 'ದಿ ಮದರ್' ಅವರ ಆಧ್ಯಾತ್ಮಿಕ ಪ್ರಯಾಣವು ಅಸಂಖ್ಯಾತ ಭಾರತೀಯ ಮತ್ತು ಫ್ರೆಂಚ್ ಅನ್ವೇಷಕರಿಗೆ ಸ್ಫೂರ್ತಿ ನೀಡಿದೆ ಎಂದು ಪ್ರಧಾನಿ ಸ್ಮರಿಸಿದರು. ದಶಕಗಳ ಹಿಂದೆ, ಶ್ರೀಲ ಪ್ರಭುಪಾದ ಸ್ವಾಮಿಗಳು ಫ್ರಾನ್ಸ್‌ಗೆ ಭೇಟಿ ನೀಡಿದ್ದು, ಇಸ್ಕಾನ್ ಮೂಲಕ ಆಧ್ಯಾತ್ಮಿಕ ಸಂಪರ್ಕಗಳಲ್ಲಿ ಹೊಸ ಅಧ್ಯಾಯವನ್ನು ತೆರೆದರು.



1 ಸ್ವಾಮಿನಾರಾಯಣ ದೇವಾಲಯವು ಎಲ್ಲದಕ್ಕೂ ಹೊಸ ಆಯಾಮ

2 ಅನೇಕ ಕಲ್ಲುಗಳನ್ನು ಭಾರತದಲ್ಲಿ ಕೆತ್ತಲಾಗಿದೆ

3 ದೇವಾಲಯದಿಂದ ಹುಟ್ಟಿಕೊಂಡ ಭಾರತೀಯ ಸಂಸ್ಕೃತಿಯ ಪ್ರತಿಧ್ವನಿಸುವ ಮೌಲ್ಯಗಳು

• ಉದಯವಾಹಿನಿ, ನವದೆಹಲಿ

ಭಾರತ-ಫ್ರಾನ್ಸ್ ಸಂಬಂಧಗಳು ಹೊಸ ಎತ್ತರವನ್ನು ತಲುಪಿವೆ. ಕಾರ್ಯತಂತ್ರದ ಪಾಲುದಾರಿಕೆಯು ಅತ್ಯಂತ ವಿಶೇಷವಾಗಿದ್ದು, ಅದು ದೀರ್ಘಕಾಲದ ಸಾಂಸ್ಕೃತಿಕ ಮತ್ತು ರಾಜಕೀಯ ಸಂಬಂಧಗಳ ಘನ ಅಡಿಪಾಯದ ಮೇಲೆ ನಿಂತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಬಣ್ಣಿಸಿದರು. ಪ್ಯಾರಿಸ್‌ನಲ್ಲಿ ನಿರ್ಮಾಣವಾದ ಸ್ವಾಮಿನಾರಾಯಣ ದೇವಾಲಯವನ್ನು ವರ್ಚುವಲ್ ಮೂಲಕ ಉದ್ಘಾಟಿಸಿ ಮಾತನಾಡಿದ ಪ್ರಧಾನಿ ಮೋದಿ, ಎರಡು ರಾಷ್ಟ್ರಗಳ ನಡುವಿನ ಸಹಕಾರ ಮತ್ತು ಅವಕಾಶದ ಸಂಕೇತವಾಗಿ ಈ ಭವ್ಯ ದೇವಾಲಯ ಶತಮಾನಗಳ ಕಾಲ ನಿಲ್ಲಲಿದೆ ಎಂದು ಆಶಿಸಿದರು. ಇತ್ತೀಚಿನ ವರ್ಷಗಳಲ್ಲಿ, ಭಾರತ ಮತ್ತು ಫ್ರಾನ್ಸ್ ನಡುವಿನ ಸಂಬಂಧಗಳು ಹೊಸ ಎತ್ತರಕ್ಕೆ ತಲುಪಿವೆ. ನನ್ನ ಸ್ನೇಹಿತ, ಅಧ್ಯಕ್ಷ (ಎಮ್ಯಾನುಯೆಲ್) ಮ್ಯಾಕ್ರನ್ ಅವರೊಂದಿಗೆ, ಎರಡೂ ರಾಷ್ಟ್ರಗಳು ವಿಶೇಷ ಜಾಗತಿಕ ಕಾರ್ಯತಂತ್ರದ ಪಾಲುದಾರಿಕೆಯನ್ನು ನಿರ್ಮಿಸುತ್ತಿವೆ ಎಂದು ಅವರು ಹೇಳಿದರು. ತಂತ್ರಜ್ಞಾನ, ಕೃತಕ ಬುದ್ಧಿಮತ್ತೆ ಮತ್ತು ರಕ್ಷಣೆಯಿಂದ ಬಾಹ್ಯಾಕಾಶ ಮತ್ತು ಹವಾಮಾನ ಕ್ರಿಯೆಯವರೆಗೆ, ಭಾರತ ಮತ್ತು ಫ್ರಾನ್ಸ್ ಹೊಸ ಆವೇಗ ಮತ್ತು ಶಕ್ತಿಯೊಂದಿಗೆ ಒಟ್ಟಾಗಿ ಮುಂದುವರೆಯುತ್ತಿವೆ. ನಾವು 2026ನ್ನು ಭಾರತ-ಫ್ರಾನ್ಸ್ ನಾವೀನ್ಯತೆಯ ವರ್ಷವನ್ನಾಗಿಯೂ ಆಚರಿಸುತ್ತಿದ್ದೇವೆ. ಎರಡೂ ದೇಶಗಳ ನಡುವಿನ ಜಂಟಿ ಉದ್ಯಮದ ಸಾಧ್ಯತೆಗಳ ಬಗ್ಗೆ ಇತ್ತೀಚಿನ ದಿನಗಳಲ್ಲಿ ಸಾಕಷ್ಟು ಚರ್ಚೆ ನಡೆಯುತ್ತಿದೆ.

ಫ್ರಾನ್ಸ್‌ನಲ್ಲಿ ಭಾರತೀಯ ಸೈನಿಕರ ತ್ಯಾಗ ಇಂದಿಗೂ ಜನರ ಹೃದಯದಲ್ಲಿ ಜೀವಂತವಾಗಿದೆ ಎಂಬುದಕ್ಕೆ ಇತಿಹಾಸವೇ ಸಾಕ್ಷಿ ಎಂದು ಪ್ರಧಾನಿ ತಿಳಿಸಿದರು.

ಫ್ರಾನ್ಸ್‌ನಲ್ಲಿ ಭಾರತೀಯ ಸೈನಿಕರ ತ್ಯಾಗ ಇಂದಿಗೂ ಜನರ ಹೃದಯದಲ್ಲಿ ಜೀವಂತವಾಗಿದೆ ಎಂಬುದಕ್ಕೆ ಇತಿಹಾಸ ಸಾಕ್ಷಿಯಾಗಿದೆ ಎಂದು ಅವರು ಹೇಳಿದರು. ಸಂಸ್ಕೃತವನ್ನು ಜನಪ್ರಿಯಗೊಳಿಸುವಲ್ಲಿ ಫ್ರೆಂಚ್ ವಿದ್ವಾಂಸರು ವಹಿಸಿದ ಪ್ರಮುಖ ಪಾತ್ರ, ಭಾಷಾಭಿಮಾನಿಗಳಿಗೂ ತಿಳಿದಿದೆ. ರಾಮಕೃಷ್ಣ ಪರಮಹಂಸ ಮತ್ತು ಸ್ವಾಮಿ ವಿವೇಕಾನಂದರ ಕುರಿತು ರೊಮೈನ್ ರೋಲ್ಯಾಂಡ್ ಅವರ ಬರಹಗಳು ನಮ್ಮ ಸಮಾಜಗಳನ್ನು ಹತ್ತಿರಕ್ಕೆ ತಂದವು ಎಂದು ಅವರು ಹೇಳಿದರು. ಇದಲ್ಲದೆ, ಪ್ಯಾರಿಸ್‌ನಿಂದ ಪುದುಚೇರಿಯ ಶ್ರೀಅರಬಿಂದೋ ಆಶ್ರಮಕ್ಕೆ 'ದಿ ಮದರ್' ಅವರ ಆಧ್ಯಾತ್ಮಿಕ ಪ್ರಯಾಣವು ಅಸಂಖ್ಯಾತ ಭಾರತೀಯ ಮತ್ತು ಫ್ರೆಂಚ್ ಅನ್ವೇಷಕರಿಗೆ ಸ್ಫೂರ್ತಿ ನೀಡಿದೆ ಎಂದು ಪ್ರಧಾನಿ ಹೇಳಿದರು.

### ವಿವೇಕಾನಂದ, ಪರಮಹಂಸರ ಬಗ್ಗೆ ಗೌರವ

ದಶಕಗಳ ಹಿಂದೆ ಶ್ರೀಲ ಪ್ರಭುಪಾದ ಸ್ವಾಮಿಗಳು ಫ್ರಾನ್ಸ್‌ಗೆ ಭೇಟಿ ನೀಡಿದ್ದರು, ಇಸ್ಕಾನ್ ಮೂಲಕ ಆಧ್ಯಾತ್ಮಿಕ ಸಂಪರ್ಕಗಳಲ್ಲಿ ಹೊಸ ಅಧ್ಯಾಯ ತೆರೆಯಿತು ಎಂದು ಅವರು ಹೇಳಿದರು.

### ರಾಷ್ಟ್ರಗಳ ನಡುವಿನ ಜನರ ಸಂಪರ್ಕ ಸಾಧನ

ಯೋಗವು ನಮ್ಮ ರಾಷ್ಟ್ರಗಳ ನಡುವಿನ ಜನರಿಂದ ಜನರಿಗೆ ಸಂಪರ್ಕಕ್ಕೆ ಸೇತುವೆಯಾಗಿದೆ. ಅಂತರರಾಷ್ಟ್ರೀಯ ಯೋಗ ದಿನ ಐಫೆಲ್ ಟವರ್‌ನ ಚಿತ್ರಗಳು ಫ್ರಾನ್ಸ್‌ನಲ್ಲಿ ಯೋಗದ ಅಪಾರ ಜನಪ್ರಿಯತೆಯನ್ನು ಪ್ರತಿಬಿಂಬಿಸುತ್ತವೆ ಎಂದು ಅವರು ಹೇಳಿದರು. ಸ್ವಾಮಿನಾರಾಯಣ ದೇವಾಲಯವು ಆ ಸಾಧ್ಯತೆಗಳಿಗೆ ಹೊಸ ಆಯಾಮವನ್ನು ಸೇರಿಸುತ್ತದೆ ಎಂದು ಪ್ರಧಾನಿ ಮೋದಿ ಹೇಳಿದರು - ಇದು 'ಭಾರತದಲ್ಲಿ ತಯಾರಿಸಲ್ಪಟ್ಟಿದೆ' ಮತ್ತು 'ಫ್ರಾನ್ಸ್‌ನಲ್ಲಿ ನಿರ್ಮಿಸಲಾಗಿದೆ. ಅದರ ಅನೇಕ ಕಲ್ಲುಗಳನ್ನು ಭಾರತದಲ್ಲಿ ಕೆತ್ತಲಾಗಿದೆ, ಭಾರತದ ಪ್ರಾಚೀನ ಕರಕುಶಲತೆಯನ್ನು ಫ್ರಾನ್ಸ್‌ನಲ್ಲಿ ಆಧುನಿಕ ಇಂಜಿನಿಯರಿಂಗ್‌ನೊಂದಿಗೆ ಬೆರೆಸಲಾಗಿದೆ ಎಂದು ಅವರು ಹೇಳಿದರು.

### ಈ ದೇವಾಲಯಕ್ಕೆ ಭೇಟಿ ನೀಡಲು ಬಯಸುತ್ತೇನೆ

ಪ್ಯಾರಿಸ್‌ನಲ್ಲಿ ಹೊಸದಾಗಿ ನಿರ್ಮಿಸಲಾದ ದೇವಾಲಯದಿಂದ ಹುಟ್ಟಿಕೊಂಡ ಭಾರತೀಯ ಸಂಸ್ಕೃತಿಯ ಪ್ರತಿಧ್ವನಿಸುವ ಮೌಲ್ಯಗಳು ಯುರೋಪಿನಾದ್ಯಂತ ಜನರಿಗೆ ಪ್ರಯೋಜನವನ್ನು ನೀಡುತ್ತವೆ ಎಂಬ ವಿಶ್ವಾಸವಿದೆ ಎಂದು ಪ್ರಧಾನಿ ಮೋದಿ ಹೇಳಿದರು. ಭವಿಷ್ಯದಲ್ಲಿ ಸಮಯ ಸಿಕ್ಕಾಗಲೆಲ್ಲಾ ದೇವಾಲಯಕ್ಕೆ ಭೇಟಿ ನೀಡಿ ಗೌರವ ಸಲ್ಲಿಸಲು ಖಂಡಿತವಾಗಿಯೂ ಪ್ರಯತ್ನಿಸುತ್ತೇನೆ ಎಂದು ಅವರು ಹೇಳಿದರು. ಈಗ, ಈ ಭವ್ಯವಾದ ಬಿಎಪಿಎಸ್ ದೇವಾಲಯದ (ಬಿಎಪಿಎಸ್ ಸ್ವಾಮಿನಾರಾಯಣ ಸಂಸ್ಥೆ) ಮೂಲಕ, ನಮ್ಮ ಸಾಂಸ್ಕೃತಿಕ ಸಂಬಂಧಗಳಿಗೆ ಮತ್ತೊಂದು ಮೈಲಿಗಲ್ಲು ಸೇರ್ಪಡೆಯಾಗುತ್ತಿದೆ ಎಂದು ಅವರು ಹೇಳಿದರು.



## ರಾಜ್ಯ ಸರ್ಕಾರದ ವಿರುದ್ಧ ಶೇ.40 ಕಮಿಷನ್ ಆರೋಪ ಮಾಡಿದ ಅಶೋಕ್

• ಉದಯವಾಹಿನಿ, ಬೆಂಗಳೂರು

ಸರ್ಕಾರಿ ಶಾಲಾ ಮಕ್ಕಳಿಗೆ ಉಚಿತವಾಗಿ ವಿತರಿಸಲಾಗಿರು ಶೂ-ಸಾಕ್ಸ್‌ಗಳು ಕಳಪೆ ಗುಣಮಟ್ಟದ್ದು ಎಂಬ ಆರೋಪದ ಬೆನ್ನಲ್ಲೇ ರಾಜ್ಯ ಸರ್ಕಾರದ ವಿರುದ್ಧ ವಿಪಕ್ಷ ನಾಯಕ ಆರ್.ಅಶೋಕ್ ಗಂಭೀರ ಆರೋಪ ಮಾಡಿದ್ದಾರೆ. ಬಡ ಮತ್ತು ಆರ್ಥಿಕವಾಗಿ ಹಿಂದುಳಿದ ಕುಟುಂಬಗಳ ಮಕ್ಕಳಿಗಾಗಿ ನೀಡುವ ಉಚಿತ ಶೂ-ಸಾಕ್ಸ್ ಯೋಜನೆಯಲ್ಲೂ ಶೇ. 40 ಕಮಿಷನ್ ಹೊಡೆದು ಕಳಪೆ ಸಾಮಗ್ರಿ ಪೂರೈಸಿರುವುದು ಈ ಭ್ರಷ್ಟ ಕಾಂಗ್ರೆಸ್ ಸರ್ಕಾರದ ನಿರ್ಲಜ್ಜತನಕ್ಕೆ ಮತ್ತೊಂದು ಉದಾಹರಣೆ ಎಂದವರು ಕಿಡಿಕಾರಿದ್ದಾರೆ.

ಧಾರವಾಡ, ರಾಯಚೂರು, ತುಮಕೂರು, ಬಳ್ಳಾರಿ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಸರ್ಕಾರ ವಿತರಿಸಿದ ಶೂಗಳ ಅಡಿಭಾಗ (ಸೋಲ್) ಕಿತ್ತುಹೋಗಿವೆ, ಹೊಲಿಗೆಗಳು ಬಿಟ್ಟುಕೊಂಡಿವೆ. ಒಂದು ವಾರವೂ ಬಾಳಿಕೆ ಬಾರದ ಇಂತಹ ಕಳಪೆ ಬೂಟುಗಳನ್ನು ವಿತರಿಸಿ ಮಕ್ಕಳ ಭಾವನೆಗಳ ಜೊತೆ ಆಟವಾಡುತ್ತಿದ್ದೀರಾ? ಮತ್ತೆ ಪೋಷಕರೇ ಕೈಯಿಂದ ಹಣ ಹಾಕಿ ಖರೀದಿಸಬೇಕಾದರೆ ಈ ಯೋಜನೆಯ ನೈಜ ಉದ್ದೇಶವೇನು? ಪೂರೈಕೆದಾರರ



ಜೊತೆ ಶಾಮೀಲಾಗಿ, ಯಾವುದೇ ಗುಣಮಟ್ಟದ ಪರಿಶೀಲನೆ ನಡೆಸದೆ ಕಳಪೆ ಶೂಗಳನ್ನು ಶಾಲೆಗಳಿಗೆ ಸರಬರಾಜು ಮಾಡಿದ ಅಧಿಕಾರಿಗಳು ಮತ್ತು ಗುತ್ತಿಗೆದಾರರ ಮೇಲೆ ಕಠಿಣ ಕ್ರಮ ಕೈಗೊಳ್ಳಲು ಧೈರ್ಯವಿದೆಯೇ? ಎಂದು ಅಶೋಕ್ ಪ್ರಶ್ನಿಸಿದ್ದಾರೆ.

ಅಧಿಕಾರದ ಅಮಲಿನಲ್ಲಿ ತೇಲುತ್ತಿರುವ ಮುಖ್ಯಮಂತ್ರಿಗಳೇ, ಸರ್ಕಾರಿ ಶಾಲೆಗಳ ಬಡ ಮಕ್ಕಳ ಪಾದರಕ್ಷೆಯಲ್ಲೂ ಕಮಿಷನ್ ಹೊಡೆಯುವ ದರಿದ್ರ ಸ್ಥಿತಿಗೆ ನಿಮ್ಮ ಸರ್ಕಾರ ತಲುಪಿರುವುದು ತೀರಾ ನಾಚಿಕೆಗೇಡು. ಕೂಡಲೇ ಈ ಕಳಪೆ ಶೂ ಪೂರೈಸಿದ ಗುತ್ತಿಗೆದಾರರನ್ನು ಬ್ಲಾಕ್‌ಲಿಸ್ಟ್‌ಗೆ ಸೇರಿಸಿ, ತನಿಖೆ ನಡೆಸಿ, ಬಡ ಮಕ್ಕಳಿಗೆ ತಕ್ಷಣವೇ ಅತ್ಯುತ್ತಮ ಗುಣಮಟ್ಟದ ಶೂ ಮತ್ತು ಸಾಕ್ಸ್ ವಿತರಿಸಬೇಕು ಎಂದವರು ಆಗ್ರಹಿಸಿದ್ದಾರೆ.

## ಕೆಪಿಎಸ್‌ಸಿ ಮಾಜಿ ಅಧ್ಯಕ್ಷ ಶಿವಶಂಕರಪ್ಪಗೆ ಹೈಕೋರ್ಟ್ ಬಿಗ್ ಶಾಕ್

• ಉದಯವಾಹಿನಿ, ಬೆಂಗಳೂರು

ಪಶುವೈದ್ಯಾಧಿಕಾರಿ ಹುದ್ದೆಗಳ ನೇಮಕಾತಿ ಅಕ್ರಮ ಪ್ರಕರಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ಲೋಕ ಸೇವಾ ಆಯೋಗದ (ಕೆಪಿಎಸ್‌ಸಿ) ಮಾಜಿ ಅಧ್ಯಕ್ಷ ಶಿವಶಂಕರಪ್ಪ ಸಾಹುಕರ್ ಜಾಮೀನು ಅರ್ಜಿ ವಜಾಗೊಂಡಿದೆ.

ಶಿವಶಂಕಂರಪ್ಪ ಸಲ್ಲಿಸಿದ್ದ ಜಾಮೀನು ಅರ್ಜಿಯನ್ನು ನ್ಯಾಯಮೂರ್ತಿ ಎಸ್. ವಿಶ್ವಜಿತ್ ಶೆಟ್ಟಿ ಅವರು ವಿಚಾರಣೆ ನಡೆಸುವ ವೇಳೆ ಫುಲ್ ಕ್ಲಾಸ್ ತೆಗೆದುಕೊಂಡಿದ್ದಾರೆ.ನೀಟ್ ಪರೀಕ್ಷೆ ಅಕ್ರಮದಿಂದ ಕೆಲ ವಿದ್ಯಾರ್ಥಿಗಳೇ ಅತ್ಮಹತ್ಯೆ ಮಾಡಿಕೊಂಡಿದ್ದಾರೆ. ಇಂತಹ ಕೃತ್ಯಗಳಿಂದಾಗಿಯೇ ಇತ್ತೀಚೆಗೆ ಭಾರೀ ಪ್ರತಿಭಟನೆ ನಡೆದಿದೆ. ಹೀಗಾದರೆ ರಾತ್ರಿ ಹಗಲು ಓದಿದವರ ಕಥೆ ಏನಾಗಬೇಕು ಕೆಪಿಎಸ್‌ಸಿ ಮೇಲಿನ ಜನರ ವಿಶ್ವಾಸವೇ ನಾಶವಾಗಿದೆ. ನಿಮ್ಮ ಕುಟುಂಬದ ಸದಸ್ಯರೇ ಇದರಲ್ಲಿ ಭಾಗಿಯಾಗಿದ್ದಾರೆ. ಇದು ವ್ಯವಸ್ಥಿತ ಫ್ರಾಡ್ ಎಂದು ತರಾಟೆಗೆ ತೆಗೆದುಕೊಂಡು ಜಾಮೀನು ಅರ್ಜಿಯನ್ನು ವಜಾ ಮಾಡಿದ್ದಾರೆ. ಬೇರೆಯವರಿಗೆ ಹೋಲಿಸಿದರೆ ಅರ್ಜಿದಾರರ ಪಾತ್ರ ಗಂಭೀರವಾಗಿದೆ.

ಸರ್ಕಾರ ಒದಗಿಸಿರುವ ದಾಖಲೆಗಳು ಅರ್ಜಿದಾರರ ವಿರುದ್ಧವಾಗಿದೆ. ವ್ಯವಸ್ಥೆ ಹೀಗಾದರೆ ಪ್ರತಿಭಾನ್ವಿತ ವಿದ್ಯಾರ್ಥಿಗಳ ಪಾಡೇನಾಗಬೇಕು. ಪರೀಕ್ಷೆ ಬರೆದ ಕುಟುಂಬದವರ ಸ್ಥಿತಿ ಏನಾಗಬೇಕು ಅಕ್ರಮ ಎಸಗಿದವರನ್ನು ಅಲ್ಲಲ್ಲೇ ಬಂಧಿಸಬೇಕು. ವ್ಯವಸ್ಥಿತ ಫ್ರಾಡ್‌ನಲ್ಲಿ ಶಿವಶಂಕರಪ್ಪ ಕುಟುಂಬ ಭಾಗಿಯಾಗಿದೆ/ ಪರೀಕ್ಷಾ ನಿಯಂತ್ರಕರು, ಸದಸ್ಯರು ಭಾಗಿಯಾಗಿರುವುದು ಕಾಣುತ್ತಿದೆ ಎಂದು ನ್ಯಾಯಮೂರ್ತಿ ಎಸ್.ವಿಶ್ವಜಿತ್ ಶೆಟ್ಟಿ ಅವರಿದ್ದ ಹೈಕೋರ್ಟ್ ಪೀಠ ಅಭಿಪ್ರಾಯ ಪಟ್ಟಿದೆ. ನಿರ್ದಿಷ್ಟ ಹುದ್ದೆಗಳ ಅರ್ಜಿದಾರರು ಸಾಹುಕಾರ್ ಸಂಪರ್ಕದಲ್ಲಿದ್ದರು.

ಬಂಧಿತ ಕನ್ನಾಳೆ ಕೂಡಾ ಸಾಹುಕಾರ್ ಜೊತೆ ಸಂಪರ್ಕದಲ್ಲಿದ್ದ. ಪರೀಕ್ಷೆಯ ದಿನದಂದು ಖಾಸಗಿ ಫೋನ್‌ನಿಂದ ರಾತ್ರಿ 8 ಗಂಟೆಯವರೆಗೆ ಫಲಾನುಭವಿಗಳ ಜೊತೆ ಮಾತನಾಡಿದ್ದಾರೆ.

# ನೈಸ್ ಸಂಸ್ಥೆಗೆ ಭೂಮಿ ಕೊಟ್ಟವರಿಗೆ ನಿವೇಶನ ನೀಡುವ ಸರ್ಕಾರದ ತೀರ್ಮಾನಕ್ಕೆ ದೇವೇಗೌಡರ ವಿರೋಧ: ಸಿಎಂಗೆ ಪತ್ರ

## ನೈಸ್ ಅಕ್ರಮ ನಡೆಯಲು ರಾಜಕೀಯ ಮುಖಂಡರ ಸಹಕಾರ ಇದೆ ಎಂದು ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಆರೋಪಿಸಿದ್ದಾರೆ.

• ಉದಯವಾಹಿನಿ, ಬೆಂಗಳೂರು

ನೈಸ್ ಸಂಸ್ಥೆ ಬಗ್ಗೆ ರಾಜೀ ಮಾಡಿಕೊಳ್ಳುವ ಪ್ರಶ್ನೆಯೇ ಇಲ್ಲ. ರೈತರಿಗೆ ನ್ಯಾಯ ಒದಗಿಸಲು ಶಕ್ತಿ ಮೀರಿ ನಮ್ಮ ಪಕ್ಷದಿಂದ ಹೋರಾಟ ಮಾಡಲಿದ್ದೇವೆ ಎಂದು ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ತಿಳಿಸಿದ್ದಾರೆ. ಜೆ.ಪಿ.ಭವನದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಬಡವರಿಗೆ ಅನ್ಯಾಯವಾಗುವುದನ್ನು ತಡೆಗಟ್ಟುವುದು ಪಕ್ಷದ ಜವಾಬ್ದಾರಿಯಾಗಿದೆ. ಸುಪ್ರೀಂ, ಹೈಕೋರ್ಟ್ ತೀರ್ಪುಗಳ ಆಧಾರದಲ್ಲಿ ವಿವರವಾದ ಬಹಿರಂಗ ಪತ್ರವನ್ನು ಸಿಎಂ ಡಿ.ಕೆ.ಶಿವಕುಮಾರ್‌ಗೆ ಬರೆದಿದ್ದೇನೆ. ನೈಸ್ ಅಕ್ರಮ ನಡೆಯಲು ರಾಜಕೀಯ ಮುಖಂಡರ ಸಹಕಾರ ಇದೆ. ಇದರಲ್ಲಿ ಯಾರ್ಯಾರ ಪಾತ್ರ ಇದೆ ಅಂತ ಹೇಳುವುದಿಲ್ಲ. ಟಿ.ಬಿ.ಜಯಚಂದ್ರ ಅಧ್ಯಕ್ಷತೆಯಲ್ಲಿ ಸಂಪುಟ ಉಪಸಮಿತಿ ರಚನೆ ಮಾಡಲಾಯಿತು. ವಿಧಾನಸಭೆಯಲ್ಲಿ ಈ ಬಗ್ಗೆ ಚರ್ಚೆಯಾಗಿದೆ. ಹೈಕೋರ್ಟ್ ದ್ವಿಸದಸ್ಯ ಪೀಠ ನೈಸ್ ಸಂಸ್ಥೆ ಬಗ್ಗೆ ಬಲವಾದ ಅಭಿಪ್ರಾಯ ವ್ಯಕ್ತಪಡಿಸಿದೆ. ಪ್ರತ್ಯೇಕವಾಗಿ ಈ ಬಗ್ಗೆ ತನಿಖೆ ಮಾಡಲು ಹೇಳಿದೆ. ಇದೆಲ್ಲ ಗೊತ್ತಿದ್ದರೂ ಸರ್ಕಾರ ಟೋಲ್ ಸಂಗ್ರಹ ಮಾಡಲು ಅನುಮತಿ ನೀಡಿದೆ ಎಂದರು. ಸುಪ್ರೀಂ ಕೋರ್ಟ್, ಹೈಕೋರ್ಟ್ ಹೇಳಿದ್ದರೂ, ನೈಸ್ ಬಗ್ಗೆ ಇವರು ಮಾತನಾಡುತ್ತಿಲ್ಲ. ಯಾವುದನ್ನೂ ಮುಚ್ಚಿಡಲು ಸಾಧ್ಯವಿಲ್ಲ. ಸಂಪುಟ ಸಭೆಯಲ್ಲಿ 1,400 ಸೈಟ್ ಕೊಡಲು ಒಪ್ಪಿಗೆ ಸೂಚಿಸಿದೆ. ಅದು ದುರುದ್ದೇಶದಿಂದ ಕೂಡಿದೆ. ಜನರ ಮೇಲಿನ ಒತ್ತಡ ತಡೆಯಲು ಟೌನ್‌ಶಿಪ್, ಆರು ಪಥಗಳ ರಸ್ತೆ, ಕಾಂಕ್ರೀಟ್ ರಸ್ತೆಗಳನ್ನು ಮಾಡಲು ಮುಂದಾಗಿದ್ದವು . ಆದರೆ, ಬಳಿಕ ಅದರಲ್ಲಿ ಅಕ್ರಮ



ನಡೆದಿದೆ. ಯಾವುದೋ ಸಣ್ಣ ಸಂಸ್ಥೆ ರಚಿಸಿ ಅದರ ಮೂಲಕ ಬಾಕಿ ಜಮೀನನ್ನು ಹೊಡೆಯಲು ಮುಂದಾಗಿದ್ದಾರೆ. ಅಲ್ಲಿ ಭೂಮಿ ಬೆಲೆ ಒಂದು ಚದರ ಅಡಿಗೆ ಕನಿಷ್ಠ 10 - 15 ಸಾವಿರ ರೂ. ಇದೆ. ಇದರ ಹಿಂದೆ ಯಾರ ಕೈವಾಡ ಇದೆ?. ಇದನ್ನು ಮುಚ್ಚಿಡಲು ಸಾಧ್ಯವಿಲ್ಲ. ಈ ಬಗ್ಗೆ ಅಮೆರಿಕದಿಂದ ಬಂದ ಬಳಿಕ ಹೆಚ್.ಡಿ.ಕುಮಾರಸ್ವಾಮಿ ಮಾತನಾಡುತ್ತಾರೆ ಎಂದು ಹೇಳಿದರು. ಸರ್ಕಾರದ ಮುಂದಿನ ನಡೆ ನೋಡಿಕೊಂಡು ನಾವು ಮುಂದಿನ ಹೋರಾಟ ಮಾಡುತ್ತೇವೆ. ಹೈಕೋರ್ಟ್ ಯೋಜನೆ ವಶಕ್ಕೆ ಪಡೆದುಕೊಳ್ಳಿ, ಪ್ರತ್ಯೇಕ ತನಿಖೆ ನಡೆಸಿ ಎಂದಿದೆ. ನಮ್ಮ ಹೋರಾಟ ನಿರಂತರವಾಗಿದೆ.

### ನಿಮ್ಮ ಸಂಪುಟದಲ್ಲಿ ನೈಸ್ ಹೂಡಿಕೆದಾರರಿದ್ದಾರೆಯೇ?:

ನೈಸ್ ವಿಚಾರವಾಗಿ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಸಿಎಂ ಡಿ.ಕೆ.ಶಿವಕುಮಾರ್‌ಗೆ ಪತ್ರ ಬರೆದಿದ್ದಾರೆ. ಪತ್ರದಲ್ಲಿ 2026ರ ಸೆಪ್ಟೆಂಬರ್ 4ರಂದು, ಬೆಂಗಳೂರು-ಮೈಸೂರು ಮೂಲಸೌಕರ್ಯ ಕಾರಿಡಾರ್ ಯೋಜನೆಗೆ ಸಂಬಂಧಿಸಿದಂತೆ ಜಮೀನು ಕಳೆದುಕೊಂಡವರಿಗೆ 1,453 ನಿವೇಶನಗಳನ್ನು ಹಂಚಿಕೆ ಮಾಡಲು ನಿಮ್ಮ ಸಂಪುಟವು ನಿರ್ದೇಶನ ನೀಡಿರುವ ಬಗ್ಗೆ ವರದಿಯಾಗಿದೆ. ಸಾರ್ವಜನಿಕರ ಕಣ್ಣಿಗೆ ಮಣ್ಣೆರಚಿ, ಆಡಳಿತವನ್ನು ಹಾದಿತಪ್ಪಿಸಬಹುದು ಎಂದು ನಿಮ್ಮ ಸಂಪುಟ ಭಾವಿಸಿರುವ ಕ್ರಮ ಬೆಚ್ಚಿಬೀಳಿಸುವಂತಿದೆ. ನಿವೇಶನಗಳ ರಚನೆಗೆ ಸರ್ಕಾರ ಸತತವಾಗಿ ಅನುಮೋದನೆಯನ್ನು ನಿರಾಕರಿಸುತ್ತಾ ಬಂದಿದ್ದು, ಈ ಮಧ್ಯೆ ನಿವೇಶನಗಳ ಹಂಚಿಕೆಗೆ ಸಂಪುಟ ಸಭೆ ಅನುಮೋದನೆ ನೀಡಿದೆ ಎಂದು ಹೇಳುವುದರ ಅರ್ಥವೇನು ಎಂದು ಪ್ರಶ್ನಿಸಿದ್ದಾರೆ. 2016ರಲ್ಲಿ ನಿಮ್ಮ ಪಕ್ಷವೇ ಅಧಿಕಾರದಲ್ಲಿದ್ದಾಗ, ನ್ಯಾಯಾಂಗ ನಿಂದನೆ ಸಂದರ್ಭದಲ್ಲಿ ಸರ್ವೋಚ್ಚ ನ್ಯಾಯಾಲಯಕ್ಕೆ ಸರ್ಕಾರ ಎರಡು ಪ್ರಮಾಣಪತ್ರಗಳನ್ನು (ಅಫಿಡವಿಟ್) ಸಲ್ಲಿಸಿತ್ತು.

ರೈತರ ಭೂಮಿ ಲೂಟಿ ಹೊಡೆಯಲು ಅವಕಾಶ ನೀಡುವುದಿಲ್ಲ. ಇದು ನನ್ನ ಕಾಲದಲ್ಲೇ ಆಗಿದೆ. ಆದರೆ, ರೈತರ ಜಮೀನನ್ನು ಕೆಲವೇ ವ್ಯಕ್ತಿಗಳು ಕೋರ್ಟ್ ಆದೇಶ, ವಾಸ್ತವ ಅಂಶ ತಿಳಿಸದೇ ಸತ್ಯಾಂಶವನ್ನು ಮರೆ ಮಾಚುತ್ತಿದ್ದಾರೆ. ಕುಮಾರಸ್ವಾಮಿ ಆಧಾರ ಇಲ್ಲದೇ ಮಾತನಾಡುವುದಿಲ್ಲ.

ಅವರ ಬಳಿ ದಾಖಲೆಗಳನ್ನು ಇಟ್ಟುಕೊಂಡೇ ಮಾತನಾಡುತ್ತಾರೆ. ನನ್ನ ಬಳಿಯೂ ಕೆಲ ದಾಖಲೆಗಳು ಇವೆ. ಅದನ್ನು ಬಿಡುಗಡೆ ಮಾಡಲು ಹೋಗಲ್ಲ. ನೈಸ್ ಯೋಜನೆ ವ್ಯಾಪ್ತಿಯಲ್ಲಿ ಎಲ್ಲೆಲ್ಲಿ, ಯಾರೆಲ್ಲಾ ಭೂಮಿ ಖರೀದಿಸಿದ್ದಾರೆ ಎಂಬ ದಾಖಲೆಗಳು ನನ್ನ ಬಳಿ ಇದೆ ಎಂದು ಇದೇ ವೇಳೆ ತಿಳಿಸಿದರು. ಸರ್ವೋಚ್ಚ ನ್ಯಾಯಾಲಯವು ಸರ್ಕಾರದ ನಿಲುವನ್ನು ಪುರಸ್ಕರಿಸಿತ್ತು ಮತ್ತು ನೈಸ್ ಸಂಸ್ಥೆ ಕಟ್ಟುನಿಟ್ಟಾಗಿ ಬದ್ಧವಾಗಿರಬೇಕು ಹಾಗೂ ಇಂಟರ್‌ಚೇಂಜ್‌ಗಳಲ್ಲಿ ಮತ್ತು ರಸ್ತೆ ಹಾಗೂ ರಸ್ತೆ ಮೂಲಸೌಕರ್ಯ ನಿರ್ಮಾಣಕ್ಕಾಗಿ ಹಸ್ತಾಂತರಿಸಲಾದ ಜಾಗದಲ್ಲಿ ನಿವೇಶನಗಳನ್ನು ರಚಿಸುವುದಕ್ಕೆ ಯಾವುದೇ ಅವಕಾಶ ಇಲ್ಲ, ಅಲ್ಲದೇ, ಅದು ನಗರದ ದಟ್ಟಣೆಯನ್ನು ಕಡಿಮೆ ಮಾಡುವಮೂಲ ಆಶಯಕ್ಕೆ ಧಕ್ಕೆ ತರುತ್ತದೆ ಎಂದು ಖಡಾಖಂಡಿತವಾಗಿ ಹೇಳಿತ್ತು ಎಂದು ವಿವರಿಸಿದ್ದಾರೆ. ಮಾರ್ಚ್ 2023 ರಲ್ಲಿ ಹೈಕೋರ್ಟ್‌ನಲ್ಲಿ ಸಲ್ಲಿಕೆಯಾಗಿದ್ದ ರಿಟ್ ಅರ್ಜಿಗಳ ವಿಚಾರಣೆ ವೇಳೆ, ರಸ್ತೆ ಮತ್ತು ರಸ್ತೆ ಮೂಲಸೌಕರ್ಯಕ್ಕಾಗಿ ವಶಪಡಿಸಿಕೊಂಡ ಜಮೀನುಗಳಲ್ಲಿ ನಿವೇಶನಗಳನ್ನು ರಚಿಸಲು ಸಾಧ್ಯವಿಲ್ಲ ಎಂಬ ಕಾರಣ ನೀಡಿ, ಭೂಸಂತ್ರಸ್ತರಿಗೆ ನಿವೇಶನ ಹಂಚಿಕೆ ಮಾಡುವಂತೆ ನೈಸ್ ಸಂಸ್ಥೆ ಸಲ್ಲಿಸಿದ್ದ ಮನವಿಯನ್ನು ಸರ್ಕಾರ ತಿರಸ್ಕರಿಸಿರುವುದನ್ನು ನ್ಯಾಯಾಲಯದ ದಾಖಲೆಗಳಲ್ಲಿ ಉಲ್ಲೇಖಿಸಲಾಗಿತ್ತು.

**ಈ ದಿನದ ದರ** ಪೆಟ್ರೋಲ್: 110.82₹/L | ಡೀಸೆಲ್ : 98.77₹/L | ಬಂಗಾರ: ₹ 15,415/Gram 24ct ₹ 14,130 /Gram 22ct | ಬೆಳ್ಳಿ: ₹235.00/

# ಕೆಇಬಿ ಕಚೇರಿಗೆ ಮುತ್ತಿಗೆ ಹಾಕಿದ ರೈತರು

• ಉದಯವಾಹಿನಿ, ಗುಂಡ್ಲುಪೇಟೆ


ಉದಯವಾಹಿನಿ ಚಿತ್ರ

ರಾತ್ರಿ ವೇಳೆ ಸಮರ್ಪಕವಾಗಿ ವಿದ್ಯುತ್ ಪೂರೈಕೆ ಮಾಡುವಂತೆ ಒತ್ತಾಯಿಸಿ ದೇಪಾಪುರ ಗ್ರಾಮಸ್ಥರು ತೆರಕಣಾಂಬಿಯ ಕೆಇಬಿ ಕಚೇರಿ ಮುಂಭಾಗ ದಿಢೀರ್ ಪ್ರತಿಭಟನೆ ನಡೆಸಿದರು.

ತಾಲ್ಲೂಕಿನ ತೆರಕಣಾಂಬಿ ಗ್ರಾಮದ ಹೊರ ವಲಯದಲ್ಲಿರುವ ಕೆಇಬಿ ಕಚೇರಿ ಮುಂಭಾಗ ಜಮಾವಣೆಗೊಂಡ ದೇಪಾಪುರ ಗ್ರಾಮಸ್ಥರು ಹಾಗೂ ರೈತರು ಇಲಾಖೆ ಅಧಿಕಾರಿಗಳ ವಿರುದ್ಧ ಆಕ್ರೋಶ ಹೊರ ಹಾಕಿದರು.

ದೇಪಾಪುರ ಗ್ರಾಮಕ್ಕೆ ವಿದ್ಯುತ್ ಪೂರೈಕೆ ಮಾಡುವಲ್ಲಿ ವ್ಯತ್ಯಯವಾಗುತ್ತಿದ್ದು, ಸಿಂಗಲ್ ಮತ್ತು ತ್ರಿ ಫೇಸ್ ನೀಡುವ ಸಮಯ ಮನಸೋಇಚ್ಚೆ ವಿದ್ಯುತ್ ಕಡಿತಗೊಳಿಸುತ್ತಿರುವ ಹಿನ್ನಲೆ ಸಮಸ್ಯೆ ಉಂಟಾಗಿದೆ. ರಾತ್ರಿ ವೇಳೆ ಸರ್ಮಕವಾಗಿ ವಿದ್ಯುತ್ ಪೂರೈಕೆ ಮಾಡದ ಕಾರಣ ತೊಂದರೆ ಉಂಟಾಗಿದೆ ಎಂದು ಪ್ರತಿಭಟನಾನಿರತ ಗ್ರಾಮಸ್ಥರು ದೂರಿದರು. ಸಿಂಗಲ್ ಮತ್ತು ತ್ರಿ ಫೇಸ್ ವಿದ್ಯುತ್ ನೀಡುವಲ್ಲಿ ವ್ಯತ್ಯಯವಾಗುತ್ತಿರುವ ಕಾರಣ ಸಮರ್ಪಕವಾಗಿ ಬೆಳೆಗಳಿಗೆ ನೀರು ಬಿಡಲು ಸಾಧ್ಯವಾಗುತ್ತಿಲ್ಲ.

ಆದ್ದರಿಂದ ಅಧಿಕಾರಿಗಳು ಕೂಡಲೇ ಸಮಸ್ಯೆ ಪರಿಹರಿಸಲು ಮುಂದಾಗಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಕಚೇರಿ ಮುಂದೆ ಧರಣಿ ನಡೆಸುವುದಾಗಿ ಎಚ್ಚರಿಕೆ ನೀಡಿದರು. ಈ ಸಂದರ್ಭದಲ್ಲಿ ದೇಪಾಪುರ ಗ್ರಾಮಸ್ಥರು ಹಾಗೂ ರೈತರು ಮುಖಂಡರು ಹಾಜರಿದ್ದರು.

# ಮಂಡ್ಯದಲ್ಲಿ ಭೀಕರ ಕಾರು ಅಪಘಾತ: ಮಹಿಳೆ ಸಾವು

• ಉದಯವಾಹಿನಿ, ಮಂಡ್ಯ

ಹೆದ್ದಾರಿಗಳಲ್ಲಿ ಚಾಲಕ ಮಾಡುವ ಸಣ್ಣ ಎಡವಟ್ಟು ದೊಡ್ಡ ದುರಂತಕ್ಕೆ ಕಾರಣವಾಗುತ್ತದೆ ಎಂಬುದಕ್ಕೆ ಮತ್ತೊಂದು ನಿದರ್ಶನ ದೊರೆತಿದ್ದು, ಭೀಕರ ಕಾರು ಅಪಘಾತದಲ್ಲಿ ಮಹಿಳೆ ಸಾವನ್ನಪ್ಪಿ ನಾಲ್ವರು ಗಂಭೀರವಾಗಿ ಗಾಯಗೊಂಡಿರುವ ಘಟನೆ ನಡೆದಿದೆ. ಕರ್ನಾಟಕದ ಮಂಡ್ಯ ಜಿಲ್ಲೆ ಬೆಳ್ಳೂರು ಸಮೀಪ ಈ ಭೀಕರ ರಸ್ತೆ ಅಪಘಾತ ಸಂಭವಿಸಿದ್ದು, ಈ ದುರಂತದಲ್ಲಿ ಮಹಿಳೆಯೊಬ್ಬರು ಮೃತಪಟ್ಟಿದ್ದು, ನಾಲ್ವರು ಗಾಯಗೊಂಡಿದ್ದಾರೆ.

ಮಂಡ್ಯ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಶೋಭಾ ರಾಣಿ ಈ ಬಗ್ಗೆ ಮಾಹಿತಿ ನೀಡಿದ್ದು, ಸುಧಾ ಜೈನ್, ಅವರ ಪತಿ, ಪುತ್ರ ಹಾಗೂ ಸೊಸೆ ಸೇರಿದಂತೆ ನಾಲ್ವರು ಸ್ವಿಫ್ಟ್ ಕಾರಿನಲ್ಲಿ ಶ್ರವಣಬೆಳಗೊಳದಿಂದ ಬೆಂಗಳೂರಿನತ್ತ ಪ್ರಯಾಣಿಸುತ್ತಿದ್ದರು.ಈ ವೇಳೆ ಚಾಲಕ ಪೆಟ್ರೋಲ್ ಬಂಕ್‌ಗೆ ಪ್ರವೇಶಿಸಲು ಎಡಕ್ಕೆ ತಿರುವು ಪಡೆಯಲು ಮುಂದಾಗಿದ್ದಾರೆ. ಆದರೆ ಹಿಂದಿನಿಂದ ಬರುತ್ತಿದ್ದ ವಾಹನವನ್ನು ಗಮನಿಸದೇ ತಿರುವು ಪಡೆದಿದ್ದಾರೆ ಎನ್ನಲಾಗಿದೆ. ಇದೇ ವೇಳೆ ಹಿಂದಿನಿಂದ ಬಂದ ಟೊಯೊಟಾ ಹಿಲಕ್ಸ್ ಕಾರಿಗೆ ಡಿಕ್ಕಿ ಹೊಡೆದಿದೆ.

ಅಪಘಾತದಲ್ಲಿ ಕಾರಿನಲ್ಲಿದ್ದ ನಾಲ್ವರೂ ಗಾಯಗೊಂಡಿದ್ದು, ಅವರನ್ನು ತಕ್ಷಣ ಆಸ್ಪತ್ರೆಗೆ ದಾಖಲಿಸಲಾಯಿತು. ಆದರೆ ಗಂಭೀರವಾಗಿ ಗಾಯಗೊಂಡಿದ್ದ ಸುಧಾ ಜೈನ್ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ. ಉಳಿದ ಮೂವರು ಗಾಯಗೊಂಡಿದ್ದು, ಅಪಾಯದಿಂದ ಪಾರಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಹಿಲಕ್ಸ್ ವಾಹನದ ಚಾಲಕ ವಿಕಾಸ್ ಅವರಿಗೂ ಸಣ್ಣಪುಟ್ಟ ಗಾಯಗಳಾಗಿವೆ. ಮೃತ ಸುಧಾ ಜೈನ್ ಮೂಲತಃ ಗುಜರಾತ್‌ನವರು ಎಂದು ಪೊಲೀಸರು ತಿಳಿಸಿದ್ದಾರೆ.


ಉದಯ ವಾಹಿನಿ

ಪ್ರಾದೇಶಿಕ

ಮಂಗಳವಾರ 08 ಸೆಪ್ಟೆಂಬರ್ 2026 | 03


## ಮಿನಿ ನ್ಯೂಸ್

### ವಿವಿಧ ಇಲಾಖೆಗಳಿಂದ ಅರ್ಹ ಫಲಾನುಭವಿಗಳಿಗೆ ಸವಲತ್ತುಗಳ ವಿತರಣೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ವಿಜಯಪುರ

ಸಾರ್ವಜನಿಕರಿಂದ ಸ್ವೀಕರಿಸುವ ಅರ್ಜಿಗಳಲ್ಲಿ ಕಾನೂನು ತೊಡಕುಗಳಿಲ್ಲದ ಪ್ರಕರಣಗಳನ್ನು ನಿಗದಿತ ಕಾಲಮಿತಿಯೊಳಗೆ ವಿಲೇವಾರಿ ಮಾಡಿ ಪರಿಹಾರ ಒದಗಿಸಲಾಗುವುದು ಎಂದು ಸಮಾಜ ಕಲ್ಯಾಣ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್. ಮುನಿಯಪ್ಪ ತಿಳಿಸಿದರು.ಪಟ್ಟಣದ ಅನ್ನಪೂರ್ಣೇಶ್ವರಿ ಕಲ್ಯಾಣ ಮಂಟಪದಲ್ಲಿ ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್ ಹಾಗೂ ಪ್ರಜಾಸೇವಾ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ತಾಲ್ಲೂಕು ಮಟ್ಟದ ಪ್ರಜಾಸೇವಾ ಆಂದೋಲನ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಆಶಯದಂತೆ ಬಾಗಿಲಿಗೆ ಬಂತು ಸರ್ಕಾರ, ಸೇವೆಗೆ ಇರಲಿ ಸಹಕಾರ' ಎಂಬ ಧ್ಯೇಯದೊಂದಿಗೆ ಪ್ರಜಾಸೇವಾ ಇಲಾಖೆ ಕಾರ್ಯಾರಂಭ ಮಾಡಿದೆ.

ಸಾರ್ವಜನಿಕರು ಸರ್ಕಾರಿ ಕಚೇರಿಗಳಿಗೆ ಅಲೆದಾಡುವುದನ್ನು ತಪ್ಪಿಸಿ, ಒಂದೇ ಸೂರಿನಡಿ ಸ್ಥಳದಲ್ಲೇ ದೂರು-ಮನವಿಗಳನ್ನು ಇತ್ಯರ್ಥಪಡಿಸಲು ಈ ಅಭಿಯಾನ ರೂಪಿಸಲಾಗಿದೆ. ಶಾಸಕರ ಅಧ್ಯಕ್ಷತೆಯಲ್ಲಿ ಆಂದೋಲನ ಸಭೆಗಳು ಜರುಗಲಿವೆ ಎಂದು ಸಚಿವರು ಹೇಳಿದರು.

ಪ್ರಜಾಸೇವಾ ಆಂದೋಲನ ಸಭೆಯಲ್ಲಿ ಸಾಮಾಜಿಕ ಭದ್ರತೆ ಹಾಗೂ ಪಿಂಚಣಿ ಮಂಜೂರಾತಿ ಪತ್ರ ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್ಟಾಪ್ ವಿತರಣೆ ಮಾಡಲಾಯಿತು. ಜಿಲ್ಲಾಧಿಕಾರಿ ಡಾ. ಕೆ.ಎನ್. ಅನುರಾಧ, ಜಿಲ್ಲಾ ಪಂಚಾಯತ್ ಸಿಇಒ ಡಾ. ವಾಸಂತಿ ಅಮರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಚಂದ್ರಕಾಂತ್, ವಿಜಯಪುರ ಪುರಸಭೆ ಅಧ್ಯಕ್ಷೆ ಭವ್ಯ ಮಹೇಶ್, ಕೆ.ಪಿ.ಸಿ.ಸಿ. ಕಾರ್ಯದರ್ಶಿ ವಿ. ಮಂಜುನಾಥ್ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಜಿಲ್ಲಾ ಮಲೆಯಾಳಿ ಸಮಾಜದಿಂದ ಓಣಂ ಸಂಗಮ್ ಆಚರಣೆ

## ಮಲೆಯಾಳಿ ಸಮಾಜದವರು ಜಾತಿ,ಮತ,ಧರ್ಮ ಭೇದವಿಲ್ಲದೆ ಓಣಂ ಹಬ್ಬವನ್ನು ಆಚರಿಸುತ್ತಾರೆ

• ಉದಯವಾಹಿನಿ, ಚಾಮರಾಜನಗರ

1 ಜಾತಿ,ಮತ,ಧರ್ಮ ಭೇದವಿಲ್ಲದೆ

2 ಸಮಾಜ ರಾಜ್ಯದ ಇತರ ಜಿಲ್ಲೆಗಳ

3 ಆರೋಗ್ಯ ತಪಾಸಣಾ ರಕ್ತದಾನ



ಉದಯವಾಹಿನಿ ಚಿತ್ರ

ಜಿಲ್ಲಾ ಮಲೆಯಾಳಿ ಸಮಾಜದಿಂದ ಭಾನುವಾರ ಓಣ ಸಂಗಮಮ್ ಸಂಭ್ರಮದಿಂದ ಆಚರಿಸಲಾಯಿತು. ಜೋಡಿ ರಸ್ತೆಯ ಸಂತ ಪೌಲರ ಸಮುದಾಯ ಭವನದಲ್ಲಿ ಮೊದಲಿಗೆ ದೀಪ ಬೆಳಗಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಮೈಸೂರಿನ ಸುಪ್ರಸಿದ್ಧ ರಘುಲಾಲ್ ಕಂಪೆನಿಯ ಔಷಧಿ ವಿತರಕರು, ಮೈಸೂರು ನಗರದ ಹಸಿರು ಹೊದಿಕೆಯ ಹರಿಕಾರ ರಾಘವನ್ ಮಾತನಾಡಿ, ಚಾಮರಾಜನಗರ ಜಿಲ್ಲಾ ಮಲೆಯಾಳಿ ಸಮಾಜ ರಾಜ್ಯದ ಇತರ ಜಿಲ್ಲೆಗಳ ಮಲೆಯಾಳಿ ಸಮಾಜಗಳಿಗೆ ಕಡಿಮೆ ಇಲ್ಲದಂತೆ ಅನೇಕ ಸೇವಾ ಕಾರ್ಯಗಳನ್ನು ನಡೆಸಿಕೊಂಡು ಬರುತ್ತಿದೆ. ಮೊಟ್ಟಮೊದಲ ಬಾರಿಗೆ ಚಾಮರಾಜನಗರದಲ್ಲಿ ಶವ ವಾಹನದ ಸೇವೆ ಕಲ್ಪಿಸಿ ಅನೇಕ ವರ್ಷಗಳ ಕಾಲ ನಡೆಸಿ, ಆರೋಗ್ಯ ತಪಾಸಣಾ ಶಿಬಿರ, ರಕ್ತದಾನ ಶಿಬಿರ, ಅದ್ದೂರಿಯಾಗಿ ಓಣ ಸಂಗಮಮ್ ನಡೆಸಿಕೊಂಡು ಬರುತ್ತಿದೆ. ಸಮಾಜಕ್ಕೆ ಸೇವೆ ಸಲ್ಲಿಸಿದವರನ್ನು ಗುರುತಿಸಿ ಅವರನ್ನು ಗೌರವಿಸುವ ಮಹತ್ಕಾರ್ಯ ಮಾಡುತ್ತಿದೆ.

ಈ ಬಾರಿ ಚಾಮರಾಜನಗರ ಪಟ್ಟಣ ಮತ್ತು ಜಿಲ್ಲೆಯ ಅನೇಕ ಕಡೆ ಸಾಲುಮರಗಳನ್ನು ಬೆಳೆಸಿ ಪೋಷಿಸುತ್ತಿರುವ ಸಿ.ಎಂ.ವೆಂಕಟೇಶ್ ರನ್ನು ಕರೆದು ಗೌರವಿಸುತ್ತಿರುವುದು ಮೈಸೂರಿನಗರದಲ್ಲಿ ಹಸಿರು ಕವಚದ ಹೊದಿಕೆ ಮಾಡುತ್ತಿರುವ ನನಗೆ ವೈಯಕ್ತಿಕವಾಗಿ ತುಂಬಾ ಖುಷಿಯ ವಿಚಾರ ಎಂದರು. ಮಲೆಯಾಳಿ ಸಮಾಜದವರು ಜಾತಿ,ಮತ,ಧರ್ಮ ಭೇದವಿಲ್ಲದೆ ಓಣಂ ಹಬ್ಬವನ್ನು ಆಚರಿಸುತ್ತಾರೆ. ಇದೊಂದು ತುಂಬಾ ಸಂತೋಷದ ವಿಚಾರ ಎಂದರು.

ಮೈಸೂರು ಕೇರಳ ಸಮಾಜಂನ ಹಿಂದಿನ ಉಪಾಧ್ಯಕ್ಷ ಹಾಗೂ ಹಿರಿಯ ಲೆಕ್ಕ ಪರಿಶೋಧಕ ಎಬ್ಬಿ ಇಪನ್, ಜಿಲ್ಲಾ ಮಲೆಯಾಳಿ ಸಮಾಜದ ಅಧ್ಯಕ್ಷ ಪ್ರಕಾಶ್ ಕಾರ್ಯದರ್ಶಿ ಸಿಬಿನ್ ಸಿ. ವರ್ಗೀಸ್ ಮಾತನಾಡಿದರು. ವೇದಿಕೆಯಲ್ಲಿ ಉಪಾಧ್ಯಕ್ಷ ನವಾಜ್ ಮಾಜಿ ಅಧ್ಯಕ್ಷ ರಾಜು ವರ್ಗೀಸ್ ಮಾಜಿ ಕಾರ್ಯದರ್ಶಿ ವಿಜಯಕುಮಾರ್ ಸಂಚಾಲಕ ರಾಬರ್ಟ್ ವರ್ಗೀಸ್ ಇದ್ದರು. ಬೆಳಗಿನಿಂದ ಸಂಜೆಯವರೆಗೂ ವಿವಿಧ ಬಗೆಯ ಹೂವುಗಳಿಂದ ಬಿಡಿಸಲಾದ ರಂಗೋಲಿ ಓಣ ಪೂಕಳಂ, ಕೇರಳದ ಸಾಂಪ್ರದಾಯಿಕ ಚಂಡೆ ಮೇಳಂ, ಸಂಗೀತ ಕಾರ್ಯಕ್ರಮ, ಕೇರಳದ ಸಾಂಪ್ರದಾಯಿಕ ನೃತ್ಯ, ಬಲಿ ಚಕ್ರವರ್ತಿ ಆಗಮಿಸಿ ನಾಡಿನ ಮಳೆಬೆಳೆ ಪ್ರಜೆಗಳ ಯೋಗಕ್ಷೇಮ ವಿಚಾರಿಸುವುದು, ಜೆಎಸ್‌ಎಸ್ ನಸಿರ್ಂಗ್ ಕಾಲೇಜು, ಮನೋನಿಧಿ ನಸಿರ್ಂಗ್ ಕಾಲೇಜು ಮಲೆಯಾಳಿ ವಿದ್ಯಾರ್ಥಿಗಳಿಂದ ಇತರರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು, ಪಿಯುಸಿಯಲ್ಲಿ ಅತಿ ಹೆಚ್ಚು ಅಂಕಗಳಿಸಿದ ಅಭಿನವ್ ವರ್ಗೀಸ್ ಮತ್ತು ಅಭಿಶೇಕ್‌ರಿಗೆ ಪ್ರತಿಭಾ ಪುರಸ್ಕಾರ, ಆಟೋಟಗಳಲ್ಲಿ ಗೆದ್ದವರಿಗೆ ಬಹುಮಾನ ವಿತರಣೆ, ಸಾಂಪ್ರದಾಯಿಕ ಭೋಜನ ಓಣಂ ಬಹು ಸಡಗರ ಸಂಭ್ರಮದಿಂದ ನಡೆಯಿತು. ಜಿಲ್ಲೆಯ ವಿವಿಧ ಭಾಗಗಳಿಂದ ನೂರಾರು ಮಲೆಯಾಳಿ ಕುಟುಂಬಗಳು ಸಕ್ರಿಯವಾಗಿ ಪಾಲ್ಗೊಂಡರು.

> ರಾಘವನ್ ಮೈಸೂರು ನಗರದಲ್ಲಿ ಸ್ವಂತ ಖರ್ಚಿನಲ್ಲಿ ಲಕ್ಷಾಂತರ ಗಿಡಗಳನ್ನು ನೆಟ್ಟು ಅವುಗಳಿಗೆ ಕಬ್ಬಿಣದ ರಕ್ಷಾ ಕವಚಗಳನ್ನು ಹಾಕಿ ನೀರೆರೆದು ಪೋಷಿಸಿ ಇಡೀ ನಗರದಲ್ಲಿ ಹಸಿರು ಕವಚ ಹೊದಿಸಿದ್ದಾರೆ. ನಾಗರಿಕರಿಗೂ ಗಿಡಗಳನ್ನು ರಕ್ಷಾ ಕವಚಗಳನ್ನು ಉಚಿತವಾಗಿ ವಿತರಿಸುತ್ತಿದ್ದಾರೆ. ಇದೇ ಕಾರ್ಯ ಮಾಡುತ್ತಿರುವ ನನಗೆ ತುಂಬಾ ಖುಷಿಯ ವಿಚಾರ ಎಂದರು. -ಸಿ.ಎ. ವೆಂಕಟೇಶ್

### ನೆಟ್ಟ ಗಿಡಗಳಿಗೆ ನೀರುಣಿಸುವುದು ಬಹಳ ಖರ್ಚು

**ಚಾಮರಾಜನಗರದಲ್ಲಿ ನನ್ನನ್ನೂ ವಿವಿಧ ಸಂಘ ಸಂಸ್ಥೆಗಳು ಕರೆದು ಗೌರವಿಸುತ್ತಾರೆ. ಇದರ ಬದಲು ನಾನು ನೆಟ್ಟ ಗಿಡಗಳಿಗೆ ನೀರುಣಿಸುವುದು ಬಹಳ ಖರ್ಚು ಬೇಡುತ್ತದೆ. ನಿಮ್ಮ ಮನೆಯ ಹುಟ್ಟು ಹಬ್ಬ ಮೊದಲಾದ ಶುಭ ಕಾರ್ಯಗಳ ವೇಳೆ ಒಂದು ಟ್ಯಾಂಕರ್ ನೀರಿನ ಹಣ ಕೊಟ್ಟು ಅರ್ಥಪೂರ್ಣವಾಗಿ ಆಚರಿಸಿ ಎಂದು ಕರೆ ಕೊಟ್ಟರು.**

# ತಿಮ್ಮಪ್ಪನ ದರ್ಶನ ಪಡೆದು ವಾಪಸಾಗುತ್ತಿದ್ದ ನಾಲ್ವರ ದುರ್ಮರಣ

• ಉದಯವಾಹಿನಿ, ಕೋಲಾರ

ತಾಲ್ಲೂಕಿನ ದೊಡ್ಡಕಾರಿ ಬಳಿ ಚೆನ್ನೈ-ಬೆಂಗಳೂರು ಎಕ್ಸ್‌ಪ್ರೆಸ್‌ವೇ ಕಾರಿಡಾರ್‌ನಲ್ಲಿ ಸೋಮವಾರ ಬೆಳಿಗ್ಗೆ ಸಂಭವಿಸಿದ ಕಾರು ಅಪಘಾತದಲ್ಲಿ ನಾಲ್ವರು ಮೃತಪಟ್ಟಿದ್ದಾರೆ. ನಾಲ್ವರು ಗಾಯಗೊಂಡಿದ್ದಾರೆ. ಬೆಂಗಳೂರಿನ ವಿದ್ಯಾರಣ್ಯಪುರದ ಶಾರದಮ್ಮ(70), ದೀಕ್ಷಿತಾ (25), ದೇವೇಂದ್ರ ಕುಮಾರ್ (41), ಜಿಷ್ಣು (13) ಮೃತರು. ಕಾರಿನಲ್ಲಿದ್ದ ಚಾಲಕ ವಿಕಾಸ್, ನೀತು, ಆದ್ವಿಕ, ಕವಿತಾ ಗಾಯಾಳುಗಳು. ಇವರನ್ನು ಬಂಗಾರಪೇಟೆ, ಕೋಲಾರ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಕುಟುಂಬಸ್ಥರು ಸೇರಿಕೊಂಡು ತಿರುಪತಿಗೆ ತೆರಳಿದ್ದರು. ತಿರುಪತಿಯ ತಿಮ್ಮಪ್ಪನ ದರ್ಶನ ಪಡೆದು ಬೆಂಗಳೂರಿಗೆ ವಾಪಸ್ಸಾಗುತ್ತಿದ್ದಾಗ ಈ ಅವಘಡ ಸಂಭವಿಸಿದೆ. ಈ ವೇಳೆ ಟೊಯೋಟಾ ರಿಯಾನ್ ಕಾರು ಡಿವೈಡರ್‌ಗೆ ಡಿಕ್ಕಿ ಹೊಡೆದಿದ್ದು, ಪರಿಣಾಮ ನಾಲ್ವರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.

ವಿಕಾಸ್, ನೀತು, ಆದ್ವಿಕ ಮೂವರು ಗಾಯಗೊಂಡಿದ್ದಾರೆ.ಕಾರು ಚಲಾಯಿಸುತ್ತಿದ್ದ ವಿಕಾಸ್ ಅವರ ಪ್ರಾಥಮಿಕ ಹೇಳಿಕೆಯ ಪ್ರಕಾರ, ಏಕಾಏಕಿ ನಾಯಿ ಅಡ್ಡ ಬಂದ ಹಿನ್ನೆಲೆಯಲ್ಲಿ ವಾಹನವನ್ನು ಪಕ್ಕಕ್ಕೆ ತಿರುಗಿಸುವ ವೇಳೆ ನಿಯಂತ್ರಣ ತಪ್ಪಿ ಡಿವೈಡರ್‌ಗೆ ಢಿಕ್ಕಿ ಹೊಡೆದಿದೆ ಎನ್ನಲಾಗಿದೆ.

ಬೇತಮಂಗಲ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿದ್ದು, ಪ್ರಕರಣ ದಾಖಲು ಮಾಡಿಕೊಂಡು ತನಿಖೆ ಕೈಗೊಂಡಿದ್ದಾರೆ.

# ರೈತರ ಎಲ್ಲಾ ರೀತಿಯ ಸಾಲ ಮನ್ನಾ ಮಾಡಲು ಒತ್ತಾಯ

• ಉದಯವಾಹಿನಿ, ಚಾಮರಾಜನಗರ


ಉದಯವಾಹಿನಿ ಚಿತ್ರ

ತೀವ್ರ ಬರದ ಸಂಕಷ್ಟದಲ್ಲಿ ಸಿಲುಕಿರುವ ರೈತರು ಸಹಕಾರ ಸಂಘಗಳಲ್ಲಿ ಪಡೆದುಕೊಂಡಿರುವ ಎಲ್ಲಾ ರೀತಿಯ ಸಾಲ ಹಾಗು ಸಾಲದ ಮೇಲಿನ ಬಡ್ಡಿಯನ್ನು ರಾಜ್ಯ ಸರ್ಕಾರ ಮನ್ನಾ ಮಾಡಬೇಕು ಎಂದು ಚಾಮರಾಜನಗರ ತಾಲ್ಲೂಕು ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ನಿ.(ಪಿಎಲ್‌ಡಿ ಬ್ಯಾಂಕ್) ಅಧ್ಯಕ್ಷ ಎಚ್.ಎಂ. ಬಸವಣ್ಣ ಒತ್ತಾಯಿಸಿದರು.

ನಗರದ ಜೆಎಸ್‌ಎಸ್ ಮಹಿಳಾ ಕಾಲೇಜಿನ ಸೆಮಿನಾರ್ ಹಾಲ್‌ನಲ್ಲಿ ನಡೆದ ಪಿಎಲ್‌ಡಿ ಬ್ಯಾಂಕ್‌ನ 2025-26ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು. ಸಭೆಯ ಆರಂಭವಾಗುತ್ತಿದ್ದಂತೆ ರೈತರು ಸಾಲ ನವೀಕರಣ ಮತ್ತು ಹೊಸ ಸದಸ್ಯರಿಗೆ ಸಾಲ ನೀಡುವಂತೆ ಮನವಿ ಮಾಡಿದರು. ಅಲ್ಲದೇ ಈಗಾಗಲೇ ಸಾಲ ಮರು ಪಾವತಿ ಮಾಡಿರುವ ರೈತರಿಗೂ ಸಹ ಸಾಲ ನವೀಕರಣ ಮಾಡುತ್ತಿಲ್ಲ ಎಂಬ ಪ್ರಶ್ನೆಗೆ ಉತ್ತರಿಸಿದ ಅಧ್ಯಕ್ಷರು, ಪಿಎಲ್‌ಡಿ ಬ್ಯಾಂಕ್ ನಬಾರ್ಡ್‌ನಿಂದ ಶೇ. 8ರ ಬಡ್ಡಿ ದರದಲ್ಲಿ ಸಾಲ ಪಡೆದು, ರೈತರಿಗೆ ಶೇ. 3ರ ಬಡ್ಡಿ ದರದಲ್ಲಿ ಸಾಲ ನೀಡುತ್ತಾ ಬಂದಿದೆ. ಕಳೆದ ಮೂರ್ನಾಲ್ಕು ವರ್ಷದಿಂದ ಸಾಲ ಪಡೆದುಕೊಂಡ ಬಹುತೇಕ ರೈತರು ಮರು ಪಾವತಿ ಮಾಡುತ್ತಿಲ್ಲ. ಜೊತೆಗೆ ಸುಸ್ತಿದಾರರಾಗಿದ್ದಾರೆ. ಇದರಿಂದ ಬ್ಯಾಂಕ್ ನಡೆಸುವುದು ಕಷ್ಟವಾಗಿದೆ. ಜೊತೆಗೆ ರೈತರು ಸಾಲ ಮರು ಪಾವತಿ ಮಾಡಿದರಷ್ಟೇ ಸಾಲವನ್ನು ನೀಡಲು ಸಾಧ್ಯವಿದೆ. ಹೀಗಾಗಿ ರೈತರು ಸಕಾಲದಲ್ಲಿ ಮರು ಪಾವತಿ ಮಾಡಿದೆ ಎಂದು ಮನವಿ ಮಾಡಿದರು.

ಈ ಹಿಂದೆ ರಾಜ್ಯ ಸರ್ಕಾರ ಬಡ್ಡಿ ಮನ್ನಾ ಮಾಡಿ, ಅಸಲು ಪಾವತಿ ಮಾಡಿ ಎಂದು ಹೇಳಿದ್ದರು ಬಹಳಷ್ಟು ರೈತರು ಮರುಪಾವತಿ ಮಾಡಲು ಕಷ್ಟಸಾಧ್ಯವಾಗಿದೆ.

### ಎಲ್ಲಾ ರೀತಿಯ ಸೌಲಭ್ಯ

**ರೈತರು ಆರ್ಥಿಕ ಪ್ರಗತಿ ಹೊಂದಲು ಸಹಕಾರ ಸಂಘಗಳ ಪಾತ್ರ ಹೆಚ್ಚಿನದಾಗಿದ್ದು, ಪ್ರತಿಯೊಬ್ಬರು ಬ್ಯಾಂಕಿನಿಂದ ದೊರೆಯುವ ಎಲ್ಲಾ ರೀತಿಯ ಸೌಲಭ್ಯಗಳನ್ನು ಪಡೆದುಕೊಳ್ಳಬೇಕು ಎಂದು ಬಸವಣ್ಣ ಮನವಿ ಮಾಡಿದರು.**

### ಅಕ್ರಮ ಚಟುವಟಿಕೆಯಲ್ಲಿ ಭಾಗಿಯಾದರೆ ಕಠಿಣ ಕಾನೂನು


ಉದಯವಾಹಿನಿ ಚಿತ್ರ

• ಉದಯವಾಹಿನಿ, ಕೆಜಿಎಫ್

ಜಿಲ್ಲೆಯಲ್ಲಿ ರೌಡಿ ಚಟುವಟಿಕೆ ಮತ್ತು ಮಾದಕವಸ್ತುಗಳ ಮಾರಾಟ ವಿರುದ್ಧ ಕಠಿಣ ಕ್ರಮಕ್ಕೆ ಈಗಾಗಲೇ ಪೊಲೀಸ್ ಇಲಾಖೆ ಮುಂದಾಗಿದ್ದು, ಈ ನಿಟ್ಟಿನಲ್ಲಿ ಡಿ.ಎ.ಆರ್ ಕವಾಯತು ಮೈದಾನದಲ್ಲಿ ಸಕ್ರಿಯ ರೌಡಿಗಳು,ಕಳವು, ಗಾಂಜಾ ಪ್ರಕರಣದ ಆರೋಪಿ ಮತ್ತು ಚಿನ್ನದ ಗಣಿ ಕಳ್ಳರ ಪರೇಡ್ ಅನ್ನು ಹಮ್ಮಿಕೊಳ್ಳಲಾಯಿತು.

ಜಿಲ್ಲಾ ಪೊಲೀಸ್ ಅಧೀಕ್ಷಕ ಶಿವಾಂಶು ರಜಪೂತ್ ಮತ್ತು ಡಿವೈಎಸ್‌ಪಿ ವಿ.ಲಕ್ಷ್ಮಯ್ಯ ನೇತೃತ್ವದ ಡಿ.ಎ.ಆರ್ ಕವಾಯತು ಮೈದಾನದಲ್ಲಿ ರೌಡಿ ಪೇರೆಡ್ ಹಮ್ಮಿಕೊಂಡಿದ್ದು,ಕೆ.ಜಿ.ಎಫ್ ಪೊಲೀಸ್ ಘಟಕದ ಎಲ್ಲಾ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿನ ಸಕ್ರಿಯ ರೌಡಿಗಳು,ಕಳವು ಆರೋಪಿಗಳು,ಗಾಂಜಾ ಪ್ರಕರಣದ ಆರೋಪಿಗಳು ಮತ್ತು ಚಿನ್ನದ ಗಣ ಪ್ರದೇಶದಲ್ಲಿನ ಕಳ್ಳತನ ಆರೋಪಿಗಳು ಸೇರಿದಂತೆ 100 ಜನ ಹಾಜರಾಗಿದ್ದರು.

ಯಾವುದೇ ಕಾನೂನು ಬಾಹಿರ ಕೃತ್ಯಗಳಲ್ಲಿ ಭಾಗಿಯಾಗದೆ ಸಾರ್ವಜನಿಕರ ನೆಮ್ಮದಿಗೆ ತೊಂದರೆ ನೀಡದೆ ಸಮಾಜದಲ್ಲಿ ಒಳ್ಳೆಯ ಪ್ರಜೆಗಳಾಗಿ ಜೀವನ ರೂಪಿಸಿಕೊಳ್ಳಲು ತಿಳುವಳಿಕೆ ನೀಡಿದ್ದಾರೆ. ರೌಡಿಗಳ ಮೇಲೆ ಪಿ.ಎ.ಆರ್ ದಾಖಲಾಗಿ ಬಾಂಡ್ ಓವರ್ ಅವಧಿಯಲ್ಲಿರುವಾಗ ರೌಡಿಗಳು ಯಾವುದೇ ರೀತಿಯ ಕಾನೂನು ಬಾಹಿರ ಕೃತ್ಯಗಳಲ್ಲಿ ಭಾಗಿಯಾದರೆ 2 ಲಕ್ಷದಂಡ ವಿಧಿಸಲಾಗುವುದು.

ಜೊತೆಗೆ ಗೂಂಡಾ ಮತ್ತು ಗಡಿಪಾರು ಕಾಯ್ದೆಯಡಿ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದೆಂದು ಜಿಲ್ಲಾ ರಕ್ಷಣಾಧಿಕಾರಿ ಶಿವಾಂಶು ರಜಪೂತ್ ಎಚ್ಚರಿಸಿದರು.

# ಭಾಗವತವು ಗುರು ಉಪದೇಶವಾಗಿದೆ: ಜಯುರಾಮ್ ಅಭಿಮತ

• ಉದಯವಾಹಿನಿ, ಕೋಲಾರ


ಉದಯವಾಹಿನಿ ಚಿತ್ರ

ಭಗವಂತನ ಅವತಾರ ಮತ್ತು ಲೀಲೆಗಳನ್ನು ಕುರಿತು ಭಾಗವತವು ರಚಿತವಾಗಿದೆ ಹಾಗೂ ಭಾಗವತವು ಗುರು ಉಪದೇಶವಾಗಿದೆ ಎಂದು ಕೈವಾರ ಕ್ಷೇತ್ರದ ಧರ್ಮಾಧಿಕಾರಿಗಳಾದ ಡಾ.ಎಂ.ಆರ್.ಜಯರಾಮ್ ರವರು ಅಭಿಪ್ರಾಯಪಟ್ಟರು.

ಕೈವಾರ ಶ್ರೀ ಯೋಗಿ ನಾರೇಯಣ ಮಠದ ವತಿಯಿಂದ ಒಂದು ವರ್ಷಗಳ ಕಾಲ ಹಮ್ಮಿಕೊಳ್ಳಲಾಗಿರುವ ಕೈವಾರ ತಾತಯ್ಯನವರ 300ನೇ ಜಯಂತೋತ್ಸವದ ಕಾರ್ಯಕ್ರಮದ ಅಂಗವಾಗಿ ಪೋತನ ಭಾಗವತ ಹಾಗೂ ಅಮರನಾರೇಯಣ ಶತಕದ ಪ್ರವಚನ ಸಪ್ತಾಹವನ್ನು ಶ್ರೀನಿವಾಸಪುರ ಪಟ್ಟಣದ ಶಂಕರಮಠದ ಜಗದ್ಗುರು ಶ್ರೀ ಭಾರತೀತೀರ್ಥ ಸಭಾ ಭವನದಲ್ಲಿ ಉದ್ಘಾಟಿಸಿ ಮಾತನಾಡಿದರು. ಭಾಗವತದಲ್ಲಿ ಪರಮಾತ್ಮನು ಯಾವ ಯಾವ ಸಮಯದಲ್ಲಿ ಬಂದಿದ್ದಾರೆ ಎಂಬುದನ್ನು ಸವಿಸ್ತಾರವಾಗಿ ಹೇಳಿದ್ದಾರೆ. ಭಾಗವತದಲ್ಲಿರುವ ಕಥೆಗಳು ಮಹತ್ವಪೂರ್ಣವಾದುದು. ಗುರು ಉಪದೇಶವೆಂದರೆ ಆತ್ಮದ ಉದ್ಧಾರ. ಭಾಗವತದ ಸಂದೇಶಗಳಿಂದ ಆತ್ಮಪ್ರಕಾಶವಾಗುತ್ತದೆ. ಗುರುಗಳು ಹೇಳಿರುವ ಸಾಧನೆಯ ಮಾರ್ಗವನ್ನು ಅನುಸರಿಸಿದರೆ ಪರಮಾತ್ಮನ ದರ್ಶನವನ್ನು ಮಾಡಬಹುದು. ನಮ್ಮಲ್ಲಿರುವ ಶತ್ರುಗಳಾದ ಆಸೆ, ಕ್ರೋಧ, ದ್ವೇಷ, ಮಾತ್ಸರ್ಯಗಳನ್ನು ಹೊಡೆದೋಡಿಸಲು ಶ್ರೀ ಭಾಗವತವು ಸಹಕಾರಿಯಾಗಿದೆ ಎಂದರು.

ಕೈವಾರ ಕ್ಷೇತದ ನಾದಸುಧಾರಸ ಸಂಕೀರ್ತನಾ ಯೋಜನೆಯ ಸಂಚಾಲಕರಾದ ವಿದ್ವಾನ್ ವಾನರಾಶಿ ಬಾಲಕೃಷ್ಣ ಭಾಗವತರ್ ರವರು ಪ್ರಸ್ತಾವಿಕವಾಗಿ ಮಾತನಾಡಿ ಕೈವಾರ ತಾತಯ್ಯನವರಿಗೆ ಪೋತನಾಮಾತ್ಯರನ್ನು ಕಂಡರೆ ಬಹು ಭಕ್ತಿ.ತಾತಯ್ಯನವರು ತಮ್ಮ ಅಮರನಾರೇಯಣ ಶತಕದಲ್ಲಿ ಕವಿನಾಯಕರಿಗೆಲ್ಲ ಕಲ್ಪವೃಕ್ಷವಿದ್ದಂತೆ ಎಂದು ಕೊಂಡಾಡಿದ್ದಾರೆ. ತಾತಯ್ಯನವರ ಸಾಹಿತ್ಯ ರಚನೆಗೂ ಪೋತನಾಮಾತ್ಯರು ರಚಿಸಿರುವ ಭಾಗವತ ಸ್ಫೂರ್ತಿಯಾಗಿದೆ. ಈ ತೆಲುಗು ಮೂಲದ ಭಾಗವತವನ್ನು ಕನ್ನಡಕ್ಕೆ ತರಬೇಕು ಎಂಬುದು. ಬಹುದಿನಗಳ ಆಸೆಯಾಗಿತ್ತು. ಆ ಆಸೆಯು ಸದ್ಗುರು ತಾತಯ್ಯನವರ ಕೃಪೆಯಿಂದ ಧರ್ಮಾಧಿಕಾರಿಗಳಾದ ಡಾ.ಎಂ. ಆರ್.ಜಯರಾಮ್‌ರವರು ಈಡೇರಿಸಿದ್ದಾರೆ.

12 ಸ್ಕಂದಗಳ 8 ಸಂಪುಟಗಳನ್ನು ಶ್ರೀ ಯೋಗಿನಾರೇಯಣ ಮಠದ ವತಿಯಿಂದ ಮುದ್ರಿಸಲಾಗಿದೆ. ಇದರ ಸದುಪಯೋಗವನ್ನು ಭಕ್ತರು ಉಪಯೋಗಿಸಿಕೊಳ್ಳಬೇಕು ಎಂದರು.

### ಪೋತನ ಭಾಗವತದ ಪ್ರವಚನ

ಕಾರ್ಯಕ್ರಮದಲ್ಲಿ ಖ್ಯಾತ ಭಾಗವತ ಪ್ರವಚನಕಾರರಾದ ಮಂಕಾಲ ಶ್ರೀಹರಿಶರ್ಮರವರು ಪೋತನ ಭಾಗವತದ ಪ್ರವಚನವನ್ನು ನೀಡಿದರು.

# ಉತ್ತರ ವಿವಿಯನ್ನು ಮಾದರಿ ವಿವಿಯನ್ನಾಗಿ ಮಾಡಲಾಗುವುದು

• ಉದಯವಾಹಿನಿ, ಕೆಜಿಎಫ್

ಬೆಂಗಳೂರು ವಿಶ್ವವಿದ್ಯಾಲಯದಿಂದ ಬೇಪಟ್ಟು ಉತ್ತರ ವಿಶ್ವವಿದ್ಯಾಲಯವನ್ನಾಗಿ ಪ್ರಾರಂಭಿಸಿ 9 ವರ್ಷಗಳುಪೂರ್ಣಗೊಂಡಿದ್ದು ಹೊಸ ಕ್ಯಾಂಪಸ್ ನಿರ್ಮಾಣ ಕಾರ್ಯ ನಡೆಯುತ್ತಿದೆ. ಹೊಸ ಕೋರ್ಸ್‌ಗಳು ಸಹ ಪ್ರಾರಂಭವಾಗುತ್ತಿದೆ ಎಂದು ಉತ್ತರ ವಿಶ್ವವಿದ್ಯಾಲಯ ಉಪಕುಲಪತಿ ಬಿ.ಕೆ.ರವಿ ಹೇಳಿದರು.

ಕ್ಯಾಸಂಬಳ್ಳಿ ಗ್ರಾಮದ ಕಲ್ಯಾಣ ಮಂಟಪದಲ್ಲಿ ಬೇತಮಂಗಲ ರೂರಲ್ ಡಿಗ್ರಿ ಕಾಲೇಜು ವತಿಯಿಂದ ಹಮ್ಮಿಕೊಂಡಿದ್ದ ಗ್ರಾಜುಯೇಷನ್ ಡೇ ಹಾಗೂ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಉನ್ನತ ಶಿಕ್ಷಣ ಇಲಾಖೆ ಸಚಿವರು ಸರ್ಕಾರ ಸಿಂಡಿಕೇಟ್ ಸದಸ್ಯರು ಹಾಗೂ ಜನಪ್ರತಿನಿಧಿಗಳು ಶಿಕ್ಷಕರ ನೇಮಕ ಶಿಕ್ಷಕೇತರ ಸಿಬ್ಬಂದಿಗಳ ನೇಮಕಾತಿಗೆ ಅನುಮತಿ ನೀಡಿದ್ದು ಉತ್ತಮ ಸಹಕಾರವನ್ನು ನೀಡುತ್ತಿದ್ದಾರೆ. ಅದರೂ ಸಹ ನಮ್ಮಲ್ಲೂ ಕೆಲವು ನ್ಯೂನತೆಗಳು ಇದ್ದು ಅವುಗಳನ್ನು ಸರಿಪಡಿಸಿಕೊಂಡು ಮುಂದಿನ ದಿನಗಳಲ್ಲಿ ಉತ್ತರ ವಿಶ್ವವಿದ್ಯಾಲಯ ಮಾದರಿ ವಿಶ್ವವಿದ್ಯಾಲಯವನ್ನಾಗಿ ರೂಪಗೊಳ್ಳಲಿದೆ ಎಂಬ ವಿಶ್ವಾಸ ನನಗೆ ಇದೆ ಎಂದು ತಿಳಿಸಿದರು.

ಉನ್ನತ ಶಿಕ್ಷಣವನ್ನು ಪುನರ್ ವ್ಯಾಖ್ಯನ ಮಾಡುವ ಸಂದರ್ಭ ಬದಗಿ ಬಂದಿದೆ. ಶಿಕ್ಷಕರು ಸಹ ತಮ್ಮ ವೃತ್ತಿಯಲ್ಲಿ ಬದಲಾವಣೆಗಳನ್ನು ರೂಡಿಸಿಕೊಳ್ಳಬೇಕು ಎಂದು ಹೇಳಿದರು. ಪೋಷಕರು ಮಕ್ಕಳ ವಿಕಸನಕ್ಕೆ ತಕ್ಕಂತೆ ಅವರ ಬೆಂಬಲಕ್ಕೆ ನಾವು ನಿಲ್ಲಬೇಕಿದೆ.

ಏಕೆಂದರೆ ಮಕ್ಕಳನ್ನು ಸಮಾಜದ ಮುಖ್ಯವಾಹಿನಿಯಲ್ಲಿ ಬದಲಾವಣೆ ಮಾಡುವ ಜಾವದ್ದಾರಿ ಶಿಕ್ಷಕರ ಮೇಲೆ ಇದೆ ಎಂದು ಪೋಷಕರು ಹೇಳುವುದು ಶಿಕ್ಷಕರು ಪೋಷಕರು ತಮ್ಮ ಮಕ್ಕಳನ್ನು ನೋಡಿಕೊಳ್ಳಬೇಕು ಎಂದು ಬಯಸುವುದು ಸರಿಯಲ್ಲ.ಪೋಷಕರು ಹಾಗೂ ಶಿಕ್ಷಕರ ಮೇಲೆ ಹೋಣೆಗಾರಿಕೆ ಇದೆ ಮತ್ತು ಪೋಷಕರು ಹಾಗೂ ಶಿಕ್ಷಕರು ಕೈಜೋಡಿಸಿದಾಗ ಮಾತ್ರ ಉತ್ತಮ ವಿದ್ಯಾರ್ಥಿ ಹೊರ ಹೋಮ್ಮಲು ಸಾಧ್ಯವೆಂದು ಹೇಳಿದರು.

### ಗುಣಮಟ್ಟದ ವಿದ್ಯುತ್ ಪೂರಕೆಗ ಆಗ್ರಹಿಸಿ ಸೆ.9 ಪ್ರತಿಭಟನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಕೋಲಾರ

ಬರ ಹಾಗೂ ಬಿಸಿಲಿನ ತಾಪದಿಂದ ರತರ ಬಳಗಳು ಒಣಗುತ್ತಿರುವ ಸಂದರ್ಭದಲ್ಲಿ ಸಮರ್ಪಕ ಹಾಗೂ ಗುಣಮಟ್ಟದ ವಿದ್ಯುತ್ ಪೂರಕೆ ಮಾಡಲು ವಿಫಲವಾಗಿರುವ ಬಸ್ಕಾಂ ಇಲಾಖೆಯ ವಿರುದ್ಧ ಸೆ.9ರಂದು ಬಸ್ಕಾಂ ಕಚೇರಿ ಮುಂದೆ ಒಣ ಮೆಣಸಿನಕಾಯಿ ಹೊಗ ಹಾಕುವ ಮೂಲಕ ಹೋರಾಟ ನಡೆಸಲು ರತರು ತೀರ್ಮಾನಿಸಿದ್ದಾರ. ನಗರ ಹೊರವಲಯದ ತೋಟದಲ್ಲಿ ನಡೆದ ರೈತ ಸಂಘದ ಸಭಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ, ಮಳ ಕೊರತೆಯಿಂದಾಗಿ ರತರು ಸಂಕಷ್ಟದಲ್ಲಿದ್ದು, ಲಕ್ಷಾಂತರ ರೂಪಾಯಿ ಸಾಲ ಮಾಡಿ ಬಳದಿರುವ ಬಳಗಳಿಗ ನೀರು ಹಾಯಿಸಲು ಸಮರ್ಪಕ ವಿದ್ಯುತ್ ಸಿಗುತ್ತಿಲ್ಲ.

ಕಳದ ಮೂರು ದಿನಗಳಿಂದ ಲೋಡ್ ಶಡ್ಡಿಂಗ್ ಹೆಸರಿನಲ್ಲಿ ಕಡಿಮೆ ಅವಧಿಗ ವಿದ್ಯುತ್ ನೀಡಲಾಗುತ್ತಿದ್ದು, ಇದರಿಂದ ಬಳಗಳು ಕಣ್ಣುಮುಂದೆಯೇ ಒಣಗುತ್ತಿವೆ ಎಂದು ರತರು ಆಕ್ರೋಶ ವ್ಯಕ್ತಪಡಿಸಿದರು.ರತ ಸಂಘದ ರಾಜ್ಯ ಉಪಾಧ್ಯಕ್ಷ ಕೆ. ನಾರಾಯಣಗೌಡ ಮಾತನಾಡಿ, ರಾಜ್ಯದಲ್ಲಿ ವಿದ್ಯುತ್ ಕೊರತೆ ಇಲ್ಲವೆಂದು ಇಂಧನ ಇಲಾಖೆ ಮಾಹಿತಿ ನೀಡಿದ್ದರೂ ಸ್ಥಳಯ ಬಸ್ಕಾಂ ಅಧಿಕಾರಿಗಳು ರತರಿಗ ಸಮರ್ಪಕ ವಿದ್ಯುತ್ ಪೂರಕೆ ಮಾಡುತ್ತಿಲ್ಲ ರತರು ಲಕ್ಷಾಂತರ ರೂಪಾಯಿ ಬಂಡವಾಳ ಹೂಡಿ ಬಳ ಬಳದಿದ್ದು, ವಿದ್ಯುತ್ ಕಡಿತದಿಂದ ಬಳ ನಷ್ಟವಾದರ ರತರ ಗತಿ ಏನು ಎಂದು ಪ್ರಶ್ನಿಸಿದರು. ಸಮಸ್ಯೆ ಕುರಿತು ಅಧಿಕಾರಿಗಳನ್ನು ಪ್ರಶ್ನಿಸಿದರ ರತರ ಮೇಲೆಯೇ ದಬ್ಬಾಳಿಕೆ ಮಾಡಲಾಗುತ್ತಿದೆ.

# ಅಕ್ರಮ ಕಟ್ಟಡ ಯಾರದ್ದೇ ಇರಲಿ, ನೆಲಸಮ ಮಾಡಿ; ಸ್ಪಷ್ಟ ನಿರ್ದೇಶನ

• ಉದಯವಾಹಿನಿ, ಮಾಲೂರು


ಉದಯವಾಹಿನಿ ಚಿತ್ರ

ಭಾನುವಾರ ರಜೆ ದಿನವಾದರೂ ಬೆಳಗ್ಗೆ 6 ಗಂಟೆಗೇ ಮಾಲೂರಿಗೆ ಆಗಮಿಸಿ ಅಕಾರಿಗಳೊಂದಿಗೆ ಸಭೆ ನಡೆಸಿ, ಅಭಿವೃದ್ಧಿ ಕಾಮಗಾರಿಗಳನ್ನು ಸ್ಥಳದಲ್ಲೇ ಪರಿಶೀಲಿಸಿದ ಕೋಲಾರ ಜಿಲ್ಲಾಕಾರಿ ಎಂ.ಆರ್. ರವಿಕುಮಾರ್ ಕಾರ್ಯವೈಖರಿಗೆ ಮಾಲೂರು ಜನತೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ತಾಲ್ಲೂಕು ಕಚೇರಿಗೆ ಭೇಟಿ ನೀಡಿದ ಜಿಲ್ಲಾಕಾರಿಗಳು ಎನ್‌ಎಐಎಚ್ ಅಧಿಕಾರಿಗಳು ಹಾಗೂ ಅಭಿಯಂತರರೊಂದಿಗೆ ಸಭೆ ನಡೆಸಿದ ಬಳಿಕ ಇಂದಿರಾ ಕ್ಯಾಂಟೀನ್ ಭೇಟಿ ನೀಡಿ ಇಡ್ಲಿ ಖಾರಬಾತ್ ಸೇವಿಸಿ ಪ್ರತಿದಿನ ಆಹಾರವನ್ನು ಇದೇ ರೀತಿ ಸ್ವಚ್ಛವಾಗಿ ರುಚಿಕರವಾಗಿ ಸಾರ್ವಜನಿಕರಿಗೆ ನೀಡಬೇಕು ಎಂದು ತಿಳಿಸಿದ ಅವರು ನೂತನವಾಗಿ ನಡೆಯುತ್ತಿರುವ ಬಸ್ ನಿಲ್ದಾಣದ ಕಾಮಗಾರಿ ಸೇರಿದಂತೆ ವಿವಿಧ ಕಾಮಗಾರಿಗಳನ್ನು ಸ್ಥಳಕ್ಕೆ ತೆರಳಿ ಪರಿಶೀಲಿಸಿದರು. ನಗರ ವ್ಯಾಪ್ತಿಯಲ್ಲಿರುವ ನಿವೇಶನ, ಸರ್ವೆ ನಂಬರ್ ಜಮೀನು, ಗ್ರಾಮಠಾಣ ಹಾಗೂ ಗೋಮಾಳ ಜಮೀನುಗಳನ್ನು ಅಕ್ರಮವಾಗಿ ದಾಖಲೆ ಸೃಷ್ಟಿಸಿಕೊಂಡು ಅನಕೃತ ಕಟ್ಟಡ ನಿರ್ಮಿಸಿರುವುದು ಕಂಡುಬಂದರೆ ಯಾವುದೇ ಮುಲಾಜಿಲ್ಲದೆ ಕ್ರಮ ಕೈಗೊಳ್ಳಬೇಕು ಎಂದು ಡಿಸಿ ಖಡಕ್ ಸೂಚನೆ ನೀಡಿದರು. ಯಾವುದೇ ಪ್ರತಿಷ್ಠಿತ ವ್ಯಕ್ತಿಯಾಗಿದ್ದರೂ ಅಕ್ರಮ ಕಟ್ಟಡಗಳನ್ನು ನೆಲಸಮಗೊಳಿಸಿ, ಜಮೀನನ್ನು ನಗರಸಭೆ ವಶಕ್ಕೆ ಪಡೆಯಬೇಕು ಎಂದು ಅಕಾರಿಗಳಿಗೆ ಸ್ಪಷ್ಟ ನಿರ್ದೇಶನ ನೀಡಿದರು.

ನಗರದಲ್ಲಿ ನಡೆಯುತ್ತಿರುವ ಅಭಿವೃದ್ಧಿ ಕಾಮಗಾರಿಗಳನ್ನು ಅಧಿಕಾರಿಗಳು ನಿಯಮಿತವಾಗಿ ಸ್ಥಳಕ್ಕೆ ತೆರಳಿ ಪರಿಶೀಲಿಸಬೇಕು.

ಕಾಮಗಾರಿಗಳ ಗುಣಮಟ್ಟದಲ್ಲಿ ಯಾವುದೇ ರಾಜಿ ಮಾಡಿಕೊಳ್ಳದೆ, ನಿಗದಿತ ಅವಯೊಳಗೆ ಕಾಮಗಾರಿ ಪೂರ್ಣಗೊಳಿಸಬೇಕು ಎಂದು ಸೂಚಿಸಿದರು. ನಗರ ಸಭೆ ಮತ್ತು ಪುರಸಭೆಯಿಂದ ಕಾಮಗಾರಿಗಳ ಅನುಮೋದನೆಗೆ ಬರುವ ಪ್ರಸ್ತಾವನೆ ಕಡತಗಳನ್ನು ಅನುಮೋದಿಸುವುದರಲ್ಲಿ ವಿಳಂಬ ಮಾಡಿದ್ದರಿಂದ ನಗರ ಅಭಿವೃದ್ಧಿ ಇಲಾಖೆಯ ಎಇಇ ಗಂಗಾಧರಿಗೆ ಜಿಲ್ಲಾಕಾರಿ ತರಾಟೆಗೆ ತೆಗೆದುಕೊಂಡರು.

### ಮೈಸೂರು ದಸರಾ 2026: ಮಹೇಂದ್ರ ಆನೆಗೆ 600 ಕೆಜಿ ಭಾರದ ಮರಳು ಮೂಟೆ ಹೊರುವ ತಾಲೀಮು

• ಉದಯವಾಹಿನಿ, ಮೈಸೂರು

ನಾಡಹಬ್ಬ ದಸರಾದ ಜಂಬೂಸವಾರಿ ಮೆರವಣಿಗೆಯಲ್ಲಿ ಚಿನ್ನದ ಅಂಬಾರಿ ಹೊರುವ ಆನೆಯ ಆಯ್ಕೆಯ ಪ್ರಕ್ರಿಯೆ ಆರಂಭವಾಗಿದ್ದು, ಮಹೇಂದ್ರ ಆನೆಗೆ ಮರಳು ಮೂಟೆ ಹೊರಿಸಿ ಭಾರದ ತಾಲೀಮನ್ನು ನಡೆಸಲಾಯಿತು.

ಅಕ್ಟೋಬರ್ 11 ರಿಂದ ಅಕ್ಟೋಬರ್ 21ರವರೆಗೆ ನವರಾತ್ರಿಯ ಕಾರ್ಯಕ್ರಮಗಳು ನಡೆಯಲಿದ್ದು, ಅ.21ರಂದು ವಿಶ್ವವಿಖ್ಯಾತ ಜಂಬೂಸವಾರಿ ಮೆರವಣಿಗೆ ನಡೆಯಲಿದೆ. ಈ ಹಿನ್ನೆಲೆಯಲ್ಲಿ ಭಾನುವಾರ ಸಂಜೆ ದಸರಾ ಆನೆ ಮಹೇಂದ್ರಗೆ ಮರಳು ಮೂಟೆ ಹೊರಿಸಿ ಭಾರ ಹೊರುವ ತಾಲೀಮು ಮಾಡಿಸಲಾಯಿತು. ಮಹೇಂದ್ರ ಆನೆಗೆ ಹೆಣ್ಣಾನೆಗಳಾದ ಲಕ್ಷ್ಮೀ ಹಾಗೂ ಕಾವೇರಿ ಸಾಥ್ ನೀಡಿದವು. ಬನ್ನಿಮಂಟಪದವರೆಗಿನ ಸುಮಾರು 5 ಕಿಲೋಮೀಟರ್ ದೂರವನ್ನು ಎರಡು ಗಂಟೆಯಲ್ಲಿ ಕ್ರಮಿಸಿದ ಮಹೇಂದ್ರ ತಾನು ಚಿನ್ನದ ಅಂಬಾರಿ ಹೊರಲು ಸಿದ್ಧ ಎಂಬುದನ್ನು ನಿರೂಪಿಸಿದ. ಭಾರ ಹೊರುವ ತಾಲೀಮನ್ನು ನಡೆಸುವ ಮುನ್ನ ಗಜಪಡೆಯ ಶೆಡ್‌ನ ಆವರಣದಲ್ಲಿರುವ ಕೋಡಿ ಸೋಮೇಶ್ವರ ದೇವಾಲಯದ ಮುಂಭಾಗದಲ್ಲಿ ಪೂಜೆ ಸಲ್ಲಿಸಿದ ಬಳಿಕ ಮಹೇಂದ್ರ ಆನೆಯ ಬೆನ್ನಿನ ಮೇಲೆ ಗಾದಿ, ನಮ್ದಾ ಕಟ್ಟಿ ಸೇರಿ ಒಟ್ಟು 600 ಕೆ.ಜಿ ತೂಕದ 6 ಮರಳು ಮೂಟೆಗಳನ್ನು ಕಟ್ಟಲಾಯಿತು.

ಎಡ ಭಾಗಕ್ಕೆ ಲಕ್ಷ್ಮೀ, ಬಲ ಭಾಗಕ್ಕೆ ಕಾವೇರಿ ಆನೆಯನ್ನು ಕುಮ್ಕಿ ಆನೆಗಳಾಗಿ ನಿಲ್ಲಿಸಿ ಚಿನ್ನದ ಅಂಬಾರಿ ಕಟ್ಟುವ ಸ್ಥಳವನ್ನು ಪರಿಚಯಿಸಿದ ನಂತರ ಅರಮನೆಯ ಬಲರಾಮ ದ್ವಾರದಿಂದ ಕೆ.ಆರ್.ವೃತ್ತ ಸಯ್ಯಾಜಿರಾವ್ ರಸ್ತೆ, ಆಯುರ್ವೇದಿಕ್ ವೃತ್ತದ ಮೂಲಕ ಬನ್ನಿಮಂಟಪದ ವರೆಗೆ ತಾಮೀಮು ನಡೆಯಿತು. ಗಜಪಡೆ ಸಾಗುವ ಮಾರ್ಗದ ಎರಡೂ ಬದಿಯಲ್ಲೂ ಜನಸಾಗರವೇ ಸೇರಿದ್ದು, ಗಜಪಡೆಗಳಿಗೆ ಹೂವನ್ನು ಎಸೆದು ಭಕ್ತಿಯನ್ನು ತೋರುತ್ತಿರುವುದು ಕಂಡುಬಂತು.

# ಮುಂದಿನ ಚುನಾವಣೆಗೆ ಜನರ ಹೇಳಿದಂತೆ ನಡೆಯುವೆ

## ನನ್ನ ಜೊತೆಯಲ್ಲಿ 56 ವರ್ಷಗಳಿಂದ ಇದ್ದೀರಿ. ನಾನು ಕ್ಷೇತ್ರದಲ್ಲಿ 3 ವರ್ಷಗಳಿಂದ ಯಾವುದೇ ಕಾರ್ಯಕ್ರಮ ಮಾಡಿಲ್ಲ

• ಉದಯವಾಹಿನಿ, ಮೈಸೂರು

1 ಶಿಕ್ಷಕರ ಪಾತ್ರ ಅತ್ಯಂತ ಮಹತ್ವ

2 ಮೂಲಸೌಕರ್ಯ ಅಭಿವೃದ್ದಿಗೆ ಒತ್ತು

3 ಶಿಕ್ಷಕರ ಕೊರತೆ ನೀಗುವ ವಿಶ್ವಾಸ


ಉದಯವಾಹಿನಿ ಚಿತ್ರ

ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಪಕ್ಷ ಮುಖ್ಯವಲ್ಲ, ವ್ಯಕ್ತಿಯೇ ಮುಖ್ಯ, ಜನ ಜಿ.ಟಿ.ದೇವೇಗೌಡನೇ ಮುಖ್ಯ ಎಂದು ನನ್ನ ಕೈ ಹಿಡಿದು ಶಕ್ತಿ ತುಂಬಿದ್ದಿರಿ, ನಾನು ಕೊನೆ ಉಸಿರಿರುವರೆಗೂ ಚಾಮುಂಡೇಶ್ವರಿ ಕ್ಷೇತ್ರದ ಜನರ ಸೇವೆ ಮಾಡುತ್ತೇನೆ. ಮುಂದಿನ ಚುನಾವಣೆಗೆ ಜನರನ್ನ ಕರೆದು ಅವರು ಹೇಳಿದಂತೆ ಕೇಳುತ್ತೇನೆ ಎಂದು ಸಹಕಾರ ಮಹಾಮಂಡಳದ ಅಧ್ಯಕ್ಷ ಹಾಗೂ ಶಾಸಕ ಜಿ.ಟಿ.ದೇವೇಗೌಡ ಪರೋಕ್ಷವಾಗಿ ಗುಡುಗಿದರು.

ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಅಭ್ಯರ್ಥಿ ಯಾರು ಎಂದು ನೋಡುವುದಿಲ್ಲ, ಅವರು ನನ್ನ ಮುಖ ನೋಡುತ್ತಾರೆ ಎಂದಿದ ಎಚ್ ಡಿಕೆ ಹೇಳಿಕೆ ಪರೋಕ್ಷವಾಗಿ ಉತ್ತರಿಸಿದ ಅವರು, ನಾನು ಹಿಂದೆ ಬಿಜೆಪಿ ಹೋಗಿದಾಗ ಚಾಮುಂಡೇಶ್ವರಿಯಲ್ಲಿ ಜೆಡಿಎಸ್ ಮೂರನೇ ಸ್ಥಾನಕ್ಕೆ ಬಂದಿತ್ತು. ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಪಕ್ಷ ಮುಖ್ಯ ಅಲ್ಲ. ಅಲ್ಲಿ ಜಿ.ಟಿ ದೇವೇಗೌಡ ಮಾತ್ರ ಮುಖ್ಯ. ಜನ ನನಗಾಗಿಯೇ ಅಲ್ಲಿ ನನ್ನನ್ನು ಗೆಲ್ಲಿಸಿದ್ದಾರೆ. ನನ್ನ ವಿರುದ್ಧ ಎಂಥಂತವರು ನಿಂತರು ನನ್ನ ಕೈ ಬಿಟ್ಟಿಲ್ಲ, ಸಿಎಂ ವಿರುದ್ಧವೇ 35 ಸಾವಿರ ಮತದಿಂದ ಗೆಲ್ಲಿಸಿದ್ದರು. ಕ್ಷೇತ್ರದಲ್ಲಿ ಪಕ್ಷಕ್ಕಿಂತ ಜಿ.ಟಿ.ದೇವೇಗೌಡ ಮುಖ್ಯ ಅಂತಾ ಜನ ಸಂದೇಶ ನೀಡಿದ್ದಾರೆ. ಮೂರು ವರ್ಷದಿಂದ ನನಗೆ ಪಕ್ಷದವರಿಂದ ಜೆಡಿಎಸ್ ನಿಂದ ಅವಮಾನವಾಯಿತು. ನಾನು ಜೆಡಿಎಸ್ ಶಾಸಕ ಆದರೆ, ಜೆಡಿಎಸ್ ಯಾವ ಕಾರ್ಯಕ್ರಮಕ್ಕೂ ನನನ್ನೂ ಕರೆಯಲಿಲ್ಲ. ಯಾವ ಜೆಡಿಎಸ್ ಸಮಾವೇಶಕ್ಕೆ ಕರೆಯದೆ ನನ್ನನ್ನು ಅವಮಾನ ಮಾಡಿದರು. ಈ ಅವಮಾನಕ್ಕೆ ಉತ್ತರಕ್ಕಾಗಿ ನಮ್ಮ ಜನ ಮೆರವಣಿಗೆ ಮಾಡುತ್ತಿದ್ದಾರೆ. ಇದು ನನ್ನ ಶಕ್ತಿ ಪ್ರದರ್ಶನ ಅಲ್ಲ. ಇದು ಜನರು ನನಗೆ ಕೊಟ್ಟಿರುವ ಪ್ರೀತಿಯ ಸಂಕೇತ. ನನ್ನನ್ನು ಏಕಾಂಗಿಯಾಗಲು ಕ್ಷೇತ್ರದ ಜನರು ಬಿಡುವುದಿಲ್ಲ, ನಾನು ಸಾಯುವ ತನಕ ಏಕಾಂಗಿಯಾಗಿ ಈ ಜನರ ಸೇವೆ ಮಾಡುತ್ತೇನೆಂದರು. ಮಹಾ ಮಂಡಲದಲ್ಲಿ ಜಿ.ಟಿ.ದೇವೇಗೌಡನನ್ನು ಅಧ್ಯಕ್ಷರನ್ನಾಗಿ ಮಾಡಿದ್ದಾರೆ. ಮಹಾಮಂಡಳದಿಂದ ನನ್ನ ತೆಗೆಯಲು ಹೋರಾಟವನ್ನೇ ಮಾಡಿದ್ದರು. ಆದರೂ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಹಕಾರ ಸಚಿವ ಲಕ್ಷ್ಮಣ್ ಸವದಿ ಗೆಲ್ಲಿಸಿದ್ದಾರೆ ಅವರ ಹೆಸರನ್ನು ಹೇಳಬಾರದಾ?. ಚಾಮುಂಡೇಶ್ವರಿ ಕ್ಷೇತ್ರದ ಜನರು ಸ್ವಾಭಿಮಾನದ ಜನ, ನನ್ನ ಸೋಲಿಸಲು ಏನೆಲ್ಲಾ ಮಾಡಿದ್ದಾರೆ. ಕಳೆದ ಚುನಾವಣೆ ಜಿಲ್ಲಾ ಪಂಚಾಯತ ಅಧ್ಯಕ್ಷರು, ಸದಸ್ಯರು ಎಲ್ಲಾ ಹೋದರೂ ಜನರು ಜಿ.ಟಿದೇವೇಗೌಡರನ್ನು ಬಿಟ್ಟರಾ?, ಜಿ.ಟಿ.ದೇವೇಗೌಡ ಉಸಿರು ಇರುವವರೆಗೆ ಚಾಮುಂಡೇಶ್ವರಿ ಕ್ಷೇತ್ರದಲ್ಲಿ ನಿಲ್ಲುತ್ತೇನೆ, ಪಕ್ಷ ಯಾವುದಾದರೂ ಇರಲಿ, ಪಕ್ಷೇತರವಾದರೂ ಸರಿ ಜಿಟಿಡಿ ಚುನಾವಣೆ=ಯಲ್ಲಿ ನಿಲ್ಲಬೇಕು, ಗೆಲ್ಲಬೇಕು. ನಮ್ಮ ತಂದೆ, ತಾಯಿ, ನಿಮ್ಮನ್ನು ದೇವರು ಎಂದು ತಿಳಿದಿದ್ದೇನೆ. ಒತ್ತಡದಲ್ಲಿ ನಿಮ್ಮನ್ನು ಬೇಟಿ ಮಾಡಲು ಆಗಲ್ಲ, ನಮ್ಮ ಮನೆಗೆ ಬನ್ನಿ. ಹೇಳಿದರು.

### ದೇವೇಗೌಡ ಉಸಿರು ಇರುವ ತನಕ ನಿಮ್ಮ ಸೇವೆ

**ನನ್ನ ಜೊತೆಯಲ್ಲಿ 56 ವರ್ಷಗಳಿಂದ ಇದ್ದೀರಿ. ನಾನು ಕ್ಷೇತ್ರದಲ್ಲಿ 3 ವರ್ಷಗಳಿಂದ ಯಾವುದೇ ಕಾರ್ಯಕ್ರಮ ಮಾಡಿಲ್ಲ. ಕ್ಷೇತ್ರದಲ್ಲಿ ಕುಡಿಯುವ ನೀರು, ಬಸ್, ಶಾಲಾ ಕಾಲೇಜುಗಳ ವಿಷಯದಲ್ಲಿ ಶಕ್ತಿ ತುಂಬಿದ್ದೀರಿ. ಜಿ.ಟಿ.ದೇವೇಗೌಡ ಉಸಿರು ಇರುವ ತನಕ ನಿಮ್ಮ ಸೇವೆ ಮಾಡುವುದೇ ನನ್ನ ಗುರಿ. ಜಿ.ಟಿ.ದೇವೇಗೌಡ ಎಲ್ಲಿದ್ದಾರೆ ಎಂದು ಹೇಳುತ್ತಿದ್ದವರಿಗೆ ತಕ್ಕ ಉತ್ತರ ಕೊಟ್ಟದ್ದೀರಿ. ಇವತ್ತು ನಿಮ್ಮ ಶಕ್ತಿ ತೋರಿದ್ದೀರಿ.**

> ಪಿಎಲ್‌ಡಿ ಬ್ಯಾಂಕ್ ಚುನಾವಣೆಯಲ್ಲಿ ಎಲ್ಲಾ ಶಾಸಕರು ಒಂದು ಕಡೆ ಇದ್ದಾಗಲೂ ನೀವೆಲ್ಲಾ ಜಿ.ಟಿ.ದೇವೇಗೌಡನನ್ನು ಗೆಲ್ಲಿಸಿದ್ದೀರಿ. ನಮ್ಮ ಜಿಟಿ ದೇವೇಗೌಡ ನಮ್ಮನೆ ಮಗ ಎಂದು ಹೇಳಿದ್ದೀರಿ. ಜಿ.ಟಿ.ದೇವೇಗೌಡ ಹೆಸರು ಹೇಳಿದರೆ ಎಲ್ಲಾದರೂ ಸರಿ ಒಂದು ಕಪ್ ನೀರನ್ನಾದರೂ ಕೊಡುತ್ತಾರೆಂದರು. -ಶಾಸಕ ಜಿ.ಟಿ.ದೇವೇಗೌಡ

